# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ಯಾವಾಗ ಯಾವ ದುಷ್ಟರು ಜಗತ್ತಿನಲ್ಲಿ ದುಃಖ ತರುತ್ತಾರೋ, ಆಗ ಪ್ರತಿಯೊಬ್ಬರೂ ನರಕಯಾತನೆ ಅನುಭವಿಸಬೇಕಾಗುತ್ತದೆ. ಅಂತಹ ಸಂದರ್ಭದಲ್ಲಿ ಸಂಬಂಧಿಗಳಾಗಿದ್ದರೂ ಲೆಕ್ಕಿಸದೆ, ಮಮತೆಯನ್ನು ತೊರೆದು, ನಾವು ನಮ್ಮನ್ನು ಬಲಿದಾನ ಮಾಡಿಯಾದರೂ, ಆ ದುಷ್ಟರನ್ನು, ಅಧರ್ಮಿಯರನ್ನು ನಾಶ ಮಾಡುವುದು ಅನಿವಾರ್ಯವಾಗುತ್ತದೆ. ಆದರೆ ಅದು ಯಾವುದೋ ಸ್ವಾರ್ಥಕ್ಕಾಗಲಿ ಅಥವಾ ಇನ್ನೊಬ್ಬರ ಲಾಭಕ್ಕಾಗಲಿ ಆಗಬಾರದು. ಅದೇನಿದ್ದರೂ ಸತ್ಯ, ಧರ್ಮ ಹಾಗು ಈ ಜಗತ್ತಿನ ಉಳಿವಿಗಾಗಿ ನಡೆಯಬೇಕಾಗುತ್ತದೆ.

**ಭಗವಾನ್ ಶ್ರೀಕೃಷ್ಣ**




PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 31-10-2025 to 06-11-2025 ಬೆಲೆ:10-00 ಸಂಪುಟ–1 ಸಂಚಿಕೆ–5 ಪುಟಗಳು–6





ಕರಾವಳಿ ತರಂಗಿಣಿ

ಕನ್ನಡ ರಾಜ್ಯೋತ್ಸವದ ಶುಭಾಶಯಗಳು

ಕರಾವಳಿ ತರಂಗಿಣಿ ಮಂಗಳೂರು

ಕ್ಷಣ ಕ್ಷಣದ ಸುದ್ದಿಗಳಿಗಾಗಿ ಕರಾವಳಿ ತರಂಗಿಣಿ ಪತ್ರಿಕಾ ಬಳಗದಿಂದ ಅಂತರ್ಜಾಲ ಮಾಧ್ಯಮ

www.karavalitharangini.com

ಕರಾವಳಿ ತರಂಗಿಣಿ ಮಂಗಳೂರು




ಆಂಧ್ರಪ್ರದೇಶದ ಕರ್ನೂಲ್ ಜಿಲ್ಲೆಯ ಚಿನ್ನ ತೆಕೂರು ಗ್ರಾಮದಲ್ಲಿ ಕಾವೇರಿ ಟ್ರಾವೆಲ್ಸ್ ನ ಬಸ್ ಗೆ ಬೆಂಕಿ ಹೊತ್ತಿಕೊಂಡಿದ್ದು, ಸುಮಾರು 20 ಕ್ಕೂ ಹೆಚ್ಚು ಜನರು ಸಜೀವ ದಹನ ಆಗಿರುವ ಸುದ್ದಿ ಎಂತಹ ಕಟುಕರಿಗಾದರೂ ಒಮ್ಮೆಗೆ ಎದೆ ಜಲ್ಲೆನ್ನಿಸುವಂತದ್ದು. ಇದು ಎಲ್ಲೋ ದೂರದಲ್ಲಿ ನಡೆದಿರುವಂತದ್ದು, ಆದರೆ ನಮ್ಮ ಅವಿಭಜಿತ ದಕ್ಷಿಣ ಜಿಲ್ಲೆಯಲ್ಲಿ ಖಾಸಗಿ ಬಸ್ಸುಗಳ ವೇಗಕ್ಕೆ ಮಿತಿಯ ಅಗತ್ಯವಿದೆ. ಅದರಲ್ಲೂ ರಾತ್ರಿ ಹೊತ್ತು ದೂರದ ಊರುಗಳಿಗೆ ಹೋಗುವ ಬಸ್ಸುಗಳಂತೂ ನಾ ಮುಂದು ತಾ ಮುಂದು ಎಂದು ಓಡಿಸುವ ಪರಿ ಇಂದಲ್ಲ ನಾಳಿನ ಅಪಾಯಕ್ಕೆ ರಹದಾರಿ ಎನ್ನುವುದರಲ್ಲಿ ಸಂಶಯವಿಲ್ಲ.

## ಕೆಂಪು ಕಲ್ಲಿನ ದರ ಇಳಿಕೆ ಯಾವಾಗ – ಮಹಾಬಲ ಕೊಟ್ಟಾರಿ



ಮಂಗಳೂರು: ಕೆಂಪು ಕಲ್ಲಿನ ಗಣಿಗಾರಿಕೆಯ ಪರವಾನಿಗೆಯನ್ನು ಸರಳೀಕರಣಗೊಳಿಸಿ ಗುತ್ತಿಗೆದಾರರ ರಾಜಧನವನ್ನೂ ಸರಕಾರ ಕಡಿಮೆಗೊಳಿಸಿದ್ದರೂ, ಕೆಂಪು ಕಲ್ಲಿನ ಪೂರೈಕೆದಾರರು ದುಪ್ಪಟ್ಟು ದರ ಪಡೆಯುತ್ತಿರುವುದರಿಂದ ಕಟ್ಟಡ ಕಾಮಗಾರಿ ನಿರ್ವಹಿಸಲು ಸಾಧ್ಯವಾಗುತ್ತಿಲ್ಲ ಎಂಬುದು ಜನ ಸಾಮಾನ್ಯರ ಅಳಲು. ಹಿಂದೆ 300 ರಕ್ಕೂ ಹೆಚ್ಚು ಪರವಾನಿಗೆ ಇಲ್ಲದೆ ಕಲ್ಲು ಗಣಿಗಾರಿಕೆ ನಡೆಯುತ್ತಿತ್ತು. ಆದರೆ ಈಗ ರಾಜಧನ ಕಡಿಮೆ ಮಾಡಿ ಸುಮಾರು 50 ಪರವಾನಿಗೆ ನೀಡಲಾಗಿದೆ.

## ಬುರುಡೆ ಕೇಸ್‌ನಲ್ಲಿ ತಿಮರೋಡಿ ಟೀಂಗೆ ತಾತ್ಕಾಲಿಕ ರಿಲೀಫ್

ಮಂಗಳೂರು: ಧರ್ಮಸ್ಥಳ ತಲೆಬುರುಡೆ ಕೇಸ್ ವಿಚಾರವಾಗಿ ಗಿರೀಶ್ ಮಟ್ಟಣ್ಣನವರ್, ಮಹೇಶ್ ಶೆಟ್ಟಿ ತಿಮರೋಡಿ, ಟಿ.ಜಯಂತ್ ಮತ್ತು ವಿಠಲ್ ಗೌಡಗೆ ಕರ್ನಾಟಕ ಹೈಕೋರ್ಟ್ ತಾತ್ಕಾಲಿಕ ರಿಲೀಫ್ ನೀಡಿದೆ. ಧರ್ಮಸ್ಥಳದ ಠಾಣೆಯ ಈಖಖ 39/2025 ರದ್ದು ಕೋರಿ ಸಲ್ಲಿಸಲಾಗಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾ.ಮೊಹಮ್ಮದ್ ನವಾಜ್ ಅವರಿದ್ದ ಪೀಠ, ಪರ–ವಿರೋಧ ವಾದ ಆಲಿಸಿ ಪ್ರಕರಣದ ತನಿಖೆಗೆ ನ.12ರವರೆಗೆ ತಡೆ ನೀಡಿ ಆದೇಶ ನೀಡಿದೆ. ಅರ್ಜಿದಾರರ ಪರವಾದ ಮಂಡಿಸಿದ ವಕೀಲ ಬಾಲನ್, ಈಗಾಲೇ 9 ಬಾರಿ ನೋಟಿಸ್ ನೀಡಿ ವಿಚಾರಣೆ ನಡೆಸಲಾಗಿದೆ.

3ನೇ ಪುಟಕ್ಕೆ....



## ಯುಟಿ ಖಾದರ್ ಸ್ಪೀಕರ್ ಹುದ್ದೆಯನ್ನೂ ಲಾಭದಾಯಕವಾಗಿಸಿದ್ದಾರೆ!

ಮಂಗಳೂರು: ಸ್ಪೀಕರ್ ಹುದ್ದೆಯೂ ಲಾಭದಾಯಕ ಎಂದು ತೋರಿಸಿ ಕೊಟ್ಟವರು ಯುಟಿ ಖಾದರ್ ಶಾಸಕ ಡಾ. ವೈ ಭರತ್ ಶೆಟ್ಟಿ ಗೇಲಿ ಮಾಡಿದ್ದಾರೆ. ಅವರು ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷರಾದ ಯು.ಟಿ. ಖಾದರ್ ಅವರ ನೇತೃತ್ವದಲ್ಲಿ ವಿಧಾನಸಭೆಯ ಆಡಳಿತವು ಆಡಳಿತಾತ್ಮಕ ಸುಧಾರಣೆ ಹೆಸರಿನಲ್ಲಿ ಭಾರೀ ಅವ್ಯವಹಾರಗಳನ್ನು ನಡೆಸಿದೆ ಎಂಬ ಸಂಶಯಗಳು ಮತ್ತು ಗಂಭೀರ ಆರೋಪಗಳು ಕೇಳಿಬಂದಿವೆ. ಸದನದ ಹಿರಿಮೆ ಗರಿಮೆಯನ್ನು

3ನೇ ಪುಟಕ್ಕೆ....









# ಕೆಂಪು ಕಲ್ಲಿನ ದರ ಇಳಿಕೆ ಯಾವಾಗ– ಮಹಾಬಲ ಕೊಟ್ಟಾರಿ

ಒಂದನೇ ಪುಟದಿಂದ......

ರಾಜಧನ ಕಡಿಮೆ ಆದರೂ ಕೆಂಪುಕಲ್ಲಿನ ಪೂರೈಕೆದಾರರು ದುಪ್ಪಟ್ಟು ದರ ಪಡೆಯುತ್ತಿರುವುದರಿಂದ ಕಟ್ಟಡ ಕಾಮಗಾರಿ ನಿರ್ವಹಿಸಲು ಸಾಧ್ಯವಾಗುತ್ತಿಲ್ಲ ಎಂಬುದು ದ.ಕ. ಜಿಲ್ಲಾ ಸಿವಿಲ್ ಗುತ್ತಿಗೆದಾರರ ಅಸೋಸಿಯೇಶನ್‌ನ ಆರೋಪ. ಕೆಂಪು ಕಲ್ಲಿನ ದರ ನಿಯಂತ್ರಣಕ್ಕೆ ಜಿಲ್ಲಾಡಳಿತ ಕ್ರಮ ವಹಿಸಬೇಕು ಇಲ್ಲವಾದಲ್ಲಿ ಹೋರಾಟದ ಹಾದಿ ಹಿಡಿಯಬೇಕಾಗುತ್ತದೆ ಎನ್ನುವುದನ್ನು ಅಶೋಸಿಯೇಶನ್ ಒತ್ತಾಯಿಸಿದೆ. ಅಕ್ರಮವಾಗಿ ಕೆಂಪು ಕಲ್ಲಿನ ಗಣಿಗಾರಿಕೆ ಹಿನ್ನೆಲೆಯಲ್ಲಿ ಅಧಿಕಾರಿಗಳು ಕೆಲವೊಂದು ಕಟ್ಟುನಿಟ್ಟಿನ ಕ್ರಮ ವಹಿಸಿದ್ದರು. ಆ ಸಂದರ್ಭ ರಾಜಧನವೂ 265 ರೂ.ಗಳಿಂದ ಕೆಂಪು ಕಲ್ಲು ಗಣಿಗಾರಿಕೆ ನಡೆಸುವವರು ಸಂಕಷ್ಟಕ್ಕೆ ಸಿಲುಕಿದ್ದರು. ಕೆಂಪು ಕಲ್ಲು ಸಿಗದೆ ಸುಮಾರು ಮೂರ್ನಾಲ್ಕು ತಿಂಗಳು ನಿರ್ಮಾಣ ಕಾಮಗಾರಿಗಳಿಗೆ ತೊಂದರೆಯಾಗಿತ್ತು. ಬಳಿಕ ಈ ಬಗ್ಗೆ ಕೆಂಪು ಕಲ್ಲು ಗಣಿಗಾರಿಕೆ ಮಾಡುವವರು ಸೇರಿದಂತೆ ನಿರ್ಮಾಣ ಕಾಮಗಾರಿ ಗುತ್ತಿಗೆದಾರರು ಜಿಲ್ಲಾಧಿಕಾರಿ, ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲ್ಲೆಯ ಎಲ್ಲ ಜನಪ್ರತಿನಿಧಿಗಳ ಜತೆ ಸೇರಿ ಚರ್ಚಿಸಿ ಕ್ರಮ ವಹಿಸಲಾಗಿತು. ರಾಜಧನವನ್ನು 265 ರೂ.ಗಳಿಂದ 90ರೂ.ನಿಂದ 100 ರೂ.ಗಳಿಗೆ ಇಳಿಕೆ ಮಾಡಲಾಗಿದೆ. 3 ಅಡಿ ಗಣಿಗಾರಿಕೆಗೆ ಇದ್ದ ನಿಯಮವನ್ನು ಆರು ಅಡಿಗಳಿಗೆ ಹೆಚ್ಚಿಸಿ ಕೆಂಪು ಕಲ್ಲು ಗಣಿಗಾರಿಕೆಗೆ ಪರವಾನಿಗೆ ನೀಡಲಾಗುತ್ತಿದೆ. ಆದರೆ ಹಿಂದೆ 30 ರೂ.ಗಳಿಗೆ ದೊರೆಯುತ್ತಿದ್ದ ಕಲ್ಲಿನ ದರ ಈಗ 55 ರೂ.ಗಳಾಗಿವೆ. ರಾಜಧನ ಇಳಿಕೆಯಾದರೂ ಕೆಂಪು ಕಲ್ಲಿನ ದರ ಇಳಿಕೆ ಮಾಡಿಲ್ಲ. ಈ ದರದಲ್ಲಿ 1200 ಚದರ ಅಡಿ ವಿಸ್ತೀರ್ಣದ ಮನೆಗೆ ಅಂದಾಜು ಸುಮಾರು 3 ಲಕ್ಷದವರೆಗೆ ಹೆಚ್ಚಳವಾಗುತ್ತದೆ. ಈ ದರದಲ್ಲಿ ನಮಗೂ ಮನೆ ನಿರ್ಮಾಣ ಕಾಮಗಾರಿ ಸಾಧ್ಯವಾಗುತ್ತಿಲ್ಲ. ನಿರ್ದಿಷ್ಟ ಮೊತ್ತಕ್ಕೆ ಮನೆ ನಿರ್ಮಾಣಕ್ಕೆ ಒಪ್ಪಿಕೊಂಡ ಗುತ್ತಿಗೆದಾರರು ಈ ದರ ಏರಿಕೆಯಿಂದ ಸಂಕಷ್ಟಕ್ಕೆ ಸಿಲುಕುವಂತಾಗಿದೆ. ನಾವು ದರ ಏರಿಕೆ ಮಾಡಿದರೆ ಜನಸಾಮಾನ್ಯರಿಗೆ ಮನೆ ಕಟ್ಟಲು ಸಮಸ್ಯೆಯಾಗಲಿದೆ. ಈ ಬಗ್ಗೆ ಜಿಲ್ಲಾಡಳಿತ ಪರಿಶೀಲಿಸಿ ನ್ಯಾಯಯುತ ದರ ನಿಗದಿಪಡಿಸಬೇಕು. ಅದಲ್ಲದೆ ಸಿಆರ್‌ಝಡ್ ವ್ಯಾಪ್ತಿಯ ಮರಳಿನ ಸಮಸ್ಯೆ ಬಗೆಹರಿಸಬೇಕು. ನಾನ್ ಸಿಆರ್‌ಝಡ್ ಮರಳಿನಲ್ಲಿ ಅರ್ಧಕರ್ಧ ಕಲ್ಲು ಮಣ್ಣು ಸೇರಿರುತ್ತದೆ. ಇದರಿಂದಾಗಿ ನಷ್ಟವೇ ಅಧಿಕ ಎಂದು ಅಸೋಸಿಯೇಷನ್ ಬೇಸರ ವ್ಯಕ್ತಪಡಿಸಿದ್ದಾರೆ.

# ಯುಟಿ ಖಾದರ್ ಸ್ಪೀಕರ್ ಹುದ್ದೆಯನ್ನೂ ಲಾಭದಾಯಕವಾಗಿಸಿದ್ದಾರೆ!

ಒಂದನೇ ಪುಟದಿಂದ......

ಕಾಪಾಡಬೇಕಾದ ಸಭಾಧ್ಯಕ್ಷರ ಕಚೇರಿಯೇ ಇಂದು ಭ್ರಷ್ಟಾಚಾರದ ಆರೋಪಗಳ ಮಸಿ ಮೆತ್ತಿಕೊಂಡಿರುವುದು ಪ್ರಜಾಪ್ರಭುತ್ವದ ಮೌಲ್ಯಗಳಿಗೆ, ಸಭಾಧ್ಯಕ್ಷ ಸ್ಥಾನದ ಗೌರವಕ್ಕೂ ತೀವ್ರ ಧಕ್ಕೆಯುಂಟು ಮಾಡಿದೆ. ವಿಧಾನಸೌಧಕ್ಕೆ ವಿದ್ಯುತ್ ಅಲಂಕಾರ, ಶಾಸಕರ ಭವನಕ್ಕೆ ಹಾಸಿಗೆ-ದಿಂಬುಗಳ ಖರೀದಿ, ದುಂದುವೆಚ್ಚದ ವಿದೇಶ ಅಧ್ಯಯನ ಪ್ರವಾಸ, ಮತ್ತು ವಿಧಾನ ಸೌಧದ ಮೊಗಸಾಲೆಯಲ್ಲಿ ಮಸಾಜ್ ಪಾರ್ಲರ್ ಮಾಡಿದ ಅಪಕೀರ್ತಿ ಹಾಗೂ ಉಚಿತ ಊಟ ತಿಂಡಿ ಸರಬರಾಜು ಮಾಡಿದ್ದು ಸೇರಿದಂತೆ ಹಲವು ಅಕ್ರಮಗಳ ಬಗ್ಗೆ ಸಂಶಯವಿದೆ. ಕೋಟ್ಯಾಂತರ ರೂಪಾಯಿ ವೆಚ್ಚದಲ್ಲಿ ಮರದ ಬಾಗಿಲು ಮತ್ತು ಅನಗತ್ಯವಾದ ನೆಲಹಾಸು ಅಳವಡಿಕೆ, ವಿಧಾನಸೌಧದ ಆವರಣದಲ್ಲಿ ದುಂದುವೆಚ್ಚದ ಪುಸ್ತಕ ಮೇಳ, ವಿಧಾನಸಭೆಯ ಸಭಾಂಗಣದ ಒಳಗೆ ಎಐ ಕ್ಯಾಮರಾ ಅಳವಡಿಕೆ ಮತ್ತು ಹೊಸದಾಗಿ ಟಿವಿಗಳ ಅಳವಡಿಕೆಗಾಗಿ ಬೇಕಾಬಿಟ್ಟಿ ಖರೀದಿ ಮಾಡಿರುವುದು ಆರೋಪಕ್ಕೆ ಗುರಿಯಾಗಿದೆ. ಶಾಸಕರ ಭವನಕ್ಕೆ ಸ್ಮಾರ್ಟ್ ಡೋರ್ ಲಾಕ್, ಸ್ಮಾರ್ಟ್ ಸೇಫ್ ಲಾಕರ್ಸ್, ಸ್ಮಾರ್ಟ್ ಎನರ್ಜಿ ಸಲ್ಯೂಷನ್ಸ್, ಸ್ಟೇನ್‌ಲೆಸ್ ಸ್ಟೀಲ್ ವಾಟರ್ ಪ್ಯೂರಿಫೈಯರ್‌ಗಳ ಖರೀದಿಯಲ್ಲೂ ಸಹ ಮಾರುಕಟ್ಟೆ ದರಕ್ಕೂ ಮತ್ತು ಸಚಿವಾಲಯದ ದರಕ್ಕೂ ಅಜಗಜಾಂತರ ವ್ಯತ್ಯಾಸ ಕಂಡುಬರುತ್ತಿದೆ ಎಂದು ಹೇಳಲಾಗಿದ್ದು, ಈ ಎಲ್ಲಾ ಖರೀದಿಗಳ ಗುತ್ತಿಗೆಯನ್ನು ಅನುಮಾನಾಸ್ಪದವಾಗಿ ಮಂಗಳೂರು ಮೂಲದ ಕಂಪನಿಗಳಿಗೆ ನೀಡಲಾಗಿದೆ ಎಂಬ ಆರೋಪವಿದೆ ಎಂದು ಆರೋಪಿಸಿದರು.

# ಬುರುಡೆ ಕೇಸ್ ನಲ್ಲಿ ತಿಮರೋಡಿ ಟೀಂಗೆ ತಾತ್ಕಾಲಿಕ ರಿಲೀಫ್

ಒಂದನೇ ಪುಟದಿಂದ......

ಎಐಆರ್‌ನಲ್ಲಿ ನಮ್ಮನ್ನು ಆರೋಪಿಗಳೆಂದು ಉಲ್ಲೇಖಿಸಿಲ್ಲ. ಖುದ್ದಾಗಿ ನೋಟಿಸ್ ಜಾರಿ ಮಾಡದೇ ವಾಟ್ಸಾಪ್, ಇಮೇಲ್‌ಗಳಲ್ಲಿ ನೀಡಿದ್ದಾರೆ. BNSS ಸೆಕ್ಷನ್ 35(3) ಅಡಿಯಲ್ಲಿ ಸಮನ್ಸ್ ನೀಡಿದ್ದು, ಎಐಟಿ ಸಮನ್ಸ್ ನೀಡಿರುವುದು ಕಾನೂನು ಬಾಹಿರ. ನಾವು ಆರೋಪಿಗಳೂ ಅಲ್ಲ, ಸಾಕ್ಷಿಯೂ ಅಲ್ಲವೆಂದು ವಾದ ಮಂಡಿಸಿದ್ದರು. ರಾಜಕೀಯ, ಧಾರ್ಮಿಕ ಮತ್ತು ಸಂಘಟನಾತ್ಮಕ ವೈರತ್ವದಿಂದ ನೋಟಿಸ್ ನೀಡಲಾಗಿದ್ದು, ವಿಚಾರಣೆ ಹೆಸರಲ್ಲಿ ಬೆಳಗ್ಗೆಯಿಂದ ಮಧ್ಯರಾತ್ರಿವರೆಗೆ ಎಸ್‌ಐಟಿ ಕಚೇರಿಯಲ್ಲಿ ಕೂರಿಸಲಾಗುತ್ತೆ. ಈಗಾಗಲೇ 150 ಗಂಟೆಗೂ ಹೆಚ್ಚು ಕಾಲ ವಿಚಾರಣೆ ನಡೆಸಲಾಗಿದ್ದು, ಆರಂಭದಲ್ಲಿ 211(ಚಿ) ಅಡಿ ಎಫ್‌ಐಆರ್ ದಾಖಲಿಸಿ ನಂತರ ಬೇರೆ ಸೆಕ್ಷನ್ ಸೇರಿಸಿದ್ದಾರೆ ಎಂದು ಬಾಲನ್ ವಾದಿಸಿದ್ದಾರೆ.

# ಅರ್ಜಿ ಆಹ್ವಾನ

ಮಡಿಕೇರಿ-ಕರ್ನಾಟಕ ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿ ನಿಗಮ (ನಿ) ವತಿಯಿಂದ 2025-26ನೇ ಸಾಲಿನ ಕ್ರಿಶ್ಚಿಯನ್ ಜನಾಂಗದವರಿಗೆ ಶ್ರಮ ಶಕ್ತಿ ಯೋಜನೆ, ವೃತ್ತಿ ಪ್ರೋತ್ಸಾಹ ಯೋಜನೆ, ಶ್ರಮಶಕ್ತಿ ವಿಶೇಷ ಮಹಿಳಾ ಯೋಜನೆ, ಗಂಗಾ ಕಲ್ಯಾಣ ಯೋಜನೆಗೆ ಸಾಲ ಮತ್ತು ಸಹಾಯಧನ ಹಾಗೂ ವ್ಯಾಪಾರ ಮತ್ತು ಉದ್ಯಮಗಳಿಗೆ ನೇರ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ವಿದೇಶಿ ವಿದ್ಯಾಭ್ಯಾಸ ಸಾಲ ಯೋಜನೆ, ಮಹಿಳಾ ಸ್ವ ಸಹಾಯ ಸಂಘ ಗುಂಪುಗಳಿಗೆ ಸಹಾಯಧನವನ್ನು ನೀಡಲಾಗುತ್ತದೆ. ಸಾಲ ಹಾಗೂ ಸಹಾಯ ಧನವನ್ನು ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

# ಶಿಷ್ಯವೇತನ ಪಡೆಯಲು ಅರ್ಜಿ ಆಹ್ವಾನ

ಶಿವಮೊಗ್ಗ : 2025-26ನೇ ಸಾಲಿಗೆ ಆಡಳಿತ ನ್ಯಾಯಾಧಿಕರಣ ಯೋಜನೆಯಡಿ ಶಿವಮೊಗ್ಗ ಜಿಲ್ಲಾ ವ್ಯಾಪ್ತಿಗೆ ಒಳಪಡುವ 08 ಅಭ್ಯರ್ಥಿಗಳಿಗೆ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ ಕಾನೂನು ಪದವೀಧರರಿಗೆ ನ್ಯಾಯವಾದಿ ವೃತ್ತಿಯ ಪ್ರಾಯೋಗಿಕ ತರಬೇತಿ ಕಾರ್ಯಕ್ರಮದಡಿ ಶಿಷ್ಯ ವೇತನ ನೀಡುವ ಸಲುವಾಗಿ ಪರಿಶಿಷ್ಟ ಪಂಗಡದ ಅರ್ಹ ಕಾನೂನು ಪದವೀಧರರಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಹೆಚ್ಚಿನ ಮಾಹಿತಿಗಾಗಿ ಕಛೇರಿ ವೇಳೆಯಲ್ಲಿ ದೂ.ಸಂ.: 08182-200266/7022796636/9482762350ಗಳನ್ನು ಸಂಪರ್ಕಿಸುವುದು.

# ಸಹಾಯಕ ತಾಂತ್ರಿಕ ವ್ಯವಸ್ಥಾಪಕ ಹುದ್ದೆಗೆ ಅರ್ಜಿ ಆಹ್ವಾನ

ಶಿವಮೊಗ್ಗ : ಕೃಷಿ ಇಲಾಖೆ ವತಿಯಿಂದ 2025-26ನೇ ಸಾಲಿನ ಆತ್ಮ ಯೋಜನೆಯಡಿ ನೇರ ಗುತ್ತಿಗೆ ಆಧಾರದ ಮೇಲೆ ಒಂದು ವರ್ಷದ ಅವಧಿಗೆ ಆಯನೂರು ಹಾಗೂ ನಿದಿಗೆ-1ರ ರೈತ ಸಂಪರ್ಕ ಕೇಂದ್ರದಲ್ಲಿ ಸಹಾಯಕ ತಾಂತ್ರಿಕ ವ್ಯವಸ್ಥಾಪಕ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ:08182-221906 ನ್ನು ಸಂಪರ್ಕಿಸುವುದು.

# ಜಿ.ಟಿ.ಟಿ.ಸಿ. : ಅಲ್ಪಾವಧಿ ಕೋರ್ಸ್‌ಗಳಿಗೆ ಅರ್ಜಿ ಆಹ್ವಾನ

ಮಂಗಳೂರು-ಬೈಕಂಪಾಡಿ ಜಿ.ಟಿ.ಟಿ.ಸಿ ಡಿಪ್ಲೋಮಾ ಕಾಲೇಜಿನಲ್ಲಿ ಸಿ.ಎನ್.ಸಿ. ಮಿಲ್ಲಿಂಗ್, ಸಿ.ಎನ್.ಸಿ. ಟರ್ನಿಂಗ್, ಮ್ಯಾನುವಲ್ ಲೇತ್, ಮಿಲ್ಲಿಂಗ್ ಮೆಶಿನ್ ಆಪರೇಟರ್, ಸರ್ಫೇಸ್ ಗ್ರೈಂಡಿಂಗ್ ಆಪರೇಟರ್, ಮೆಕ್ಯಾನಿಕಲ್ ಕ್ಯಾಡ್, ಆಟೋಮೇಷನ್/ಸ್ಕಾಡಾ ಮತ್ತು ಐಒಟಿ ಯಂತಹ ಉನ್ನತ ಮತ್ತು ಉದ್ಯೋಗಾಧಾರಿತ ಅಲ್ಪಾವಧಿಯ ಕೋರ್ಸುಗಳು ಲಭ್ಯವಿದೆ.

# ಹೈನುಗಾರರಿಗೆ ನೆಲಹಾಸು ವಿತರಣೆ : ಅರ್ಜಿ ಆಹ್ವಾನ

ಮಂಗಳೂರು-ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯಿಂದ 2025-26ನೇ ಸಾಲಿಗೆ ಶೇ.50ರ ಸಹಾಯಧನದಲ್ಲಿ ಹೈನುಗಾರರಿಗೆ ರಬ್ಬರ ನೆಲಹಾಸು ವಿತರಿಸುವ ಕಾರ್ಯಕ್ರಮವಿದ್ದು, ಆಸಕ್ತ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ನವೆಂಬರ್ 10 ಕೊನೆಯ ದಿನ. ಆಸಕ್ತರು ತಾಲೂಕು ಪಶು ಆಸ್ಪತ್ರೆಯ ಮುಖ್ಯ ಪಶುವೈದ್ಯಾಧಿಕಾರಿಗಳು (ಆಡಳಿತ) ಇವರನ್ನು ಸಂಪರ್ಕಿಸಬಹುದು ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಉಪನಿರ್ದೇಶಕರು (ಆಡಳಿತ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಪರ ಸರ್ಕಾರಿ ವಕೀಲರ ಹುದ್ದೆಗೆ ಅರ್ಜಿ ಆಹ್ವಾನ

ಮಂಗಳೂರು-ಬಂಟ್ವಾಳ ತಾಲೂಕಿನ ಹಿರಿಯ ಶ್ರೇಣಿ ನ್ಯಾಯಾಲಯದ ಅಪರ ಸರ್ಕಾರಿ ವಕೀಲರ ಹುದ್ದೆಯನ್ನು ಹೊಸದಾಗಿ ತುಂಬಲು ಸರಕಾರವು ನಿರ್ಧರಿಸಿದ್ದು, ಅರ್ಹ ಆಸಕ್ತರಿರುವ ವಕೀಲರಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ಅರ್ಜಿ ನಮೂನೆಗಳು ಜಿಲ್ಲಾಧಿಕಾರಿಯವರ ಕಛೇರಿಯ ಆಡಳಿತ ಶಾಖೆಯಲ್ಲಿ ಲಭ್ಯವಿರುತ್ತದೆ. ವಿಶೇಷ ಅರ್ಹತೆಗಳೇನಾದರೂ ಇದ್ದಲ್ಲಿ ದಾಖಲೆಗಳನ್ನು ಲಗ್ತೀಕರಿಸಬೇಕು. ಅರ್ಜಿಗಳನ್ನು ಜಿಲ್ಲಾಧಿಕಾರಿಯವರ ಕಛೇರಿಯಲ್ಲಿ ಸ್ವೀಕರಿಸಲು ಕೊನೆಯ ದಿನಾಂಕ ನ. 14 ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಹಿಷ್ಣುತೆಯಿಂದ ಬದುಕುವ ವಾತಾವರಣ ಸೃಷ್ಟಿಯಾಗಬೇಕು : ಪಿಜಿಆರ್ ಸಿಂಧಿಯಾ




ಮೂಡುಬಿದಿರೆ: ಭಾರತದ ಎಲ್ಲಾ ವಿವಿಗಳು ಸ್ನಾತಕೋತ್ತರ ಹಂತದಲ್ಲಿ ಸ್ಕೌಟ್ಸ್ ಆಂಡ್ ಗೈಡ್ಸ್ ವಿದ್ಯಾರ್ಥಿಗಳಿಗೆ ಸೀಟನ್ನು ಮೀಸಲಿಡಬೇಕು. ಸ್ಕೌಟ್ಸ್ ಚಟುವಟಿಕೆಗಳನ್ನು ಪ್ರೋತ್ಸಾಹಿಸುವ ಒಂದು ಸಶಕ್ತ ಶಿಕ್ಷಣ ನೀತಿ ಬೇಕು. ಸರ್ವಧರ್ಮಗಳ ಪ್ರಾರ್ಥನೆ ಹೆಸರಿಗಷ್ಟೆ ಜರುಗದೆ ನಿಜಾರ್ಥದಲ್ಲಿ ನಾವೆಲ್ಲ ಒಂದಾಗಿ ಸಹಿಷ್ಣುತೆಯಿಂದ ಬದುಕುವ ವಾತವರಣ ನಮ್ಮ ನಡುವೆ ಸೃಷ್ಟಿಯಾಗಬೇಕು ಎಂದು ಕರ್ನಾಟಕ ಭಾರತ್ ಸ್ಕೌಟ್ಸ್ ಆಂಡ್ ಗೈಡ್ಸ್ ರಾಜ್ಯ ಮುಖ್ಯ ಆಯುಕ್ತ ಪಿಜಿಆರ್ ಸಿಂಧಿಯಾ ನುಡಿದರು. ಅವರು ಭಾರತ್ ಸ್ಕೌಟ್ಸ್ ಆಂಡ್ ಗೈಡ್ಸ್‌ನ ರಾಷ್ಟ್ರ ಹಾಗೂ ರಾಜ್ಯ ಸಂಸ್ಥೆಗಳ ವತಿಯಿಂದ, ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಸಹಯೋಗದಲ್ಲಿ ನಡೆಯುತ್ತಿರುವ ಐದು ದಿನಗಳ ರೊಬೊಟಿಕ್ಸ್, ಕೃತಕ ಬುದ್ದಿಮತ್ತೆ, ಯುವ ಉದ್ಯಮಶೀಲತೆ ಹಾಗೂ ಸ್ಟೆಮ್ ವಿಷಯಗಳನ್ನು ಒಳಗೊಂಡ ರಾಷ್ಟ್ರೀಯ ಮಟ್ಟದ ಕಾರ್ಯಗಾರದ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದರು. ಭಾರತದ 12 ರಾಜ್ಯಗಳಿಂದ ವಿದ್ಯಾರ್ಥಿಗಳು ಈ ತರಬೇತಿ ಕಾರ್ಯಾಗಾರಕ್ಕೆ ಆಗಮಿಸಿರುವುದು ಸಂತಸದ ವಿಷಯ. ಕರ್ಯಗಾರವನ್ನು ತಮ್ಮ ಉನ್ನತಿಗೆ ಉಪಯೋಗಿಸಿಕೊಳ್ಳಿ ಎಂದರು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಮಂಗಳೂರು ವಿವಿ ಕುಲಪತಿ ಡಾ। ಪಿ. ಎಲ್. ಧರ್ಮ, ಶಿಸ್ತು, ಸೇವಾ ಮನೋ ಭಾವ, ನೇತೃತ್ವ ಹಾಗೂ ಸಾಮಾಜಿಕ ಜವಾ ಬ್ದಾರಿ, ರಾಷ್ಟ್ರೀಯ ಏಕತೆಯನ್ನು ಮೂಡಿಸುತ್ತಿರುವ ಸ್ಕೌಟ್ಸ್ ಆಂದೋಲನ, ಯುವಜನತೆಯಲ್ಲಿ ಇನ್ನಷ್ಟು ಜವಾಬ್ದಾರಿ ಹಾಗೂ ಬದ್ಧತೆಯನ್ನು ಬೆಳಸಲಿ ಎಂದರು.

# ರಾಷ್ಟ್ರೀಯ ಮಟ್ಟದ ಅಂತರ್ ಕಾಲೇಜು ಉತ್ಸವ "ಮಂಥನ್ – 2025"




ಮಂಗಳೂರು: ವಿದ್ಯಾರ್ಥಿ ಜೀವನದಲ್ಲೇ ಏನಾದರೊಂದು ಗುರಿ ಇಟ್ಟುಕೊಂಡು ಸಾಧನೆ ಮಾಡಬೇಕು. ಹಾಗಿದ್ದಾಗ ಮಾತ್ರ ಭವಿಷ್ಯದ ಜೀವನದಲ್ಲಿ ಯಶಸ್ಸು ಕಟ್ಟಿಟ್ಟ ಬುತ್ತಿ.ಅಂತೆಯೇ ನೀವು ಬೆಳೆಯುವಾಗ ಇನ್ನೊಬ್ಬರಿಗೆ ನೋವು ಮಾಡಬೇಡಿ. ಇನ್ನೊಬ್ಬರನ್ನು ತುಳಿದು ಯಶಸ್ಸನ್ನು ಸಾಧಿಸುತ್ತೇನೆ ಅಂದರೆ ಅದು ಅಸಾಧ್ಯ. ಕರ್ಮ ಅನ್ನುವುದು ಯಾವತ್ತೂ ಬಿಟ್ಟು ಹೋಗೋದಿಲ್ಲ. ಎಂದು ಕನ್ನಡ ಹಾಗೂ ತುಳು ನಟ ಸ್ವರಾಜ್ ಶೆಟ್ಟಿ ತಿಳಿಸಿದರು. ಅವರು ಮಿಲಾಗ್ರಿಸ್ ಕಾಲೇಜಿನಲ್ಲಿ ಪಿಯುಸಿ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ರಾಷ್ಟ್ರೀಯ ಮಟ್ಟದ ಅಂತರ್ ಕಾಲೇಜು ಉತ್ಸವ "ಮಿಲಾಗ್ರಿಸ್ ಮಂಥನ್-2025" ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಮಿಲಾಗ್ರಿಸ್ ಸಂಸ್ಥೆಗಳ ಸಂಚಾಲಕರಾದ ರೆ. ಫಾ. ಬೊನವೆಂಚರ್ ನಜರೆತ್ ಮಾತನಾಡಿ 'ಅಂತರ್ ಕಾಲೇಜು ಸ್ಪರ್ಧೆಗಳು ವಿದ್ಯಾರ್ಥಿಗಳಿಗೆ ತಮ್ಮಲ್ಲಿರುವ ಪ್ರತಿಭೆಯನ್ನು ಪ್ರದರ್ಶಿಸಲು ಉತ್ತಮ ಅವಕಾಶ' ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಮಂಗಳೂರು ಧರ್ಮಪ್ರಾಂತ್ಯದ ವೈಸರ್ ಜನರಲ್, ಮ್ಯಾಕ್ಸಿಮ್ ಎಲ್ ನೊರೊನ್ಹ ಮಾತನಾಡಿ, ಜೀವನದಲ್ಲಿ ಸಿಗುವ ಅನುಭವಗಳೆಲ್ಲ ಒಂದೊಂದು ಪಾಠ ಕಲಿಸುತ್ತದೆ. ಇಂತಹ ಸ್ಪರ್ಧೆಗಳು ಕೂಡ ನಿಮ್ಮ ಜೀವನದಲ್ಲಿ ಮಹತ್ವದ ಪಾತ್ರವನ್ನು ವಹಿಸುವುದಕ್ಕೆ ಸಾಧ್ಯ ಎಂದರು.

# ಕಂಚಿ ಕಾಮಕೋಟಿ ಪೀಠದ ರಿಕ್ಷಾ ಧರ್ಮಸ್ಥಳಕ್ಕೆ ಕೊಡುಗೆ



ಉಜಿರೆ: ಧರ್ಮಸ್ಥಳದ ಧರ್ಮಾಧಿಕಾರಿ ಡಿ. ವೀರೇಂದ್ರ ಹೆಗ್ಗಡೆಯವರ ಪಟ್ಟಾಭಿಷೇಕದ 58ನೆ ವರ್ಧಂತ್ಯುತ್ಸವ ಆಚರಣೆಯ ಸಂದರ್ಭದಲ್ಲಿ ಕಂಚಿಕಾಮಕೋಟಿ ಪೀಠದ ಸ್ವಾಮೀಜಿಯವರು ಬಳಸುತ್ತಿದ್ದ ಪವಿತ್ರ ರಿಕ್ಷಾವನ್ನು ಧರ್ಮಸ್ಥಳಕ್ಕೆ ಕೊಡುಗೆಯಾಗಿ ಅರ್ಪಿಸಲಾಯಿತು. ಭಕ್ತರು ತಂದ ರಿಕ್ಷಾವನ್ನು ಧರ್ಮಸ್ಥಳದಲ್ಲಿ ಮಾಹಿತಿ ಕಚೇರಿ ಬಳಿಯಿಂದ ಭವ್ಯ ಮೆರವಣಿಗೆಯಲ್ಲಿ ಹೆಗ್ಗಡೆಯವರ ನಿವಾಸ ಬೀಡಿಗೆ ತರಲಾಯಿತು. ಕಂಚಿ ಕಾಮಕೋಟಿ ಸ್ವಾಮೀಜಿಯವರು ತಮ್ಮ ಪಾದಯಾತ್ರೆಯ ಸಂದರ್ಭದಲ್ಲಿ ಅವಶ್ಯಕ ವಸ್ತುಗಳಾದ ಪಾದುಕೆಗಳನ್ನು, ಅನುಷ್ಠಾನ ಪಾತ್ರೆಗಳನ್ನು ಮತ್ತು ದರ್ಭಾಸನದ ಸಾಗಾಣಿಕೆಗೆ ಇದನ್ನು ಬಳಸುತ್ತಿದ್ದರು. ಪೂಜ್ಯ ಹೆಗ್ಗಡೆಯವರು ಈ ವಿಶಿಷ್ಟ ಕೊಡುಗೆಯನ್ನು ಸ್ವೀಕರಿಸಿ ಸಂತಸ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಹೇಮಾವತಿ ವಿ. ಹೆಗ್ಗಡೆಯವರು, ಡಿ. ಸುರೇಂದ್ರ ಕುಮಾರ್, ಡಿ. ಹರ್ಷೇಂದ್ರ ಕುಮಾರ್, ಸುಪ್ರಿಯಾ ಹರ್ಷೇಂದ್ರ ಕುಮಾರ್, ಡಿ. ಶ್ರೇಯಸ್ ಕುಮಾರ್ ಉಪಸ್ಥಿತರಿದ್ದರು.

# ಎಸ್‌ಎಸ್‌ಸಿ ಆಸ್ಪತ್ರೆಯ 38 ವರ್ಷದ ಸಂಭ್ರಮಾಚರಣೆ




ಮಂಗಳೂರು: ಎಸ್‌ಎಸ್‌ಸಿ ಆಸ್ಪತ್ರೆ, ಮಂಗಳೂರು ಇದರ 38 ವರ್ಷಗಳ ಸಂಭ್ರಮಾಚರಣೆ ಮತ್ತು ಫುಜಿಫಿಲ್ಮ್ ಜಪಾನ್‌ನ 128 ಸ್ಲೈಸ್ ಕಾರ್ಡಿಯಕ್ ಸಿಟಿ ಸ್ಕ್ಯಾನ್, ಆಧುನಿಕ ರೇಡಿಯಾಲಜಿ ವಿಭಾಗ ಮತ್ತು ಎನ್‌ಎಬಿಎಲ್ ಮಾನ್ಯತೆ ಪಡೆದ ಪ್ರಯೋಗಾಲಯದ ಉದ್ಘಾಟನೆಯನ್ನು ದಕ್ಷಿಣ ಕನ್ನಡ ಜಿಲ್ಲೆಯ ಲೋಕಸಭಾ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಅವರು ಉದ್ಘಾಟಿಸಿ ಚಾಲನೆ ನೀಡಿದರು. ಈ ಸಂಧರ್ಭದಲ್ಲಿ ಮಾತನಾಡುತ್ತ ಆಸ್ಪತ್ರೆ, ಪ್ರಪ್ರಥಮವಾಗಿ ರೋಗದ ಮೂಲವನ್ನು ಪತ್ತೆ ಹಚ್ಚುವ ಯಂತ್ರವನ್ನು ಲೋಕಾರ್ಪಣೆ ಮಾಡಿರುವುದಕ್ಕೆ ಅಭಿನಂದಿಸುತ್ತೇನೆ. ಇದೊಂದು ಉತ್ತಮ ಹೆಜ್ಜೆ ಯಾವುದೇ ರೋಗವನ್ನು ಮೂಲದಿಂದ ಪತ್ತೆ ಹಚ್ಚಿ ಅದಕ್ಕೆ ಸೂಕ್ತ ಚಿಕಿತ್ಸೆ ನೀಡುವುದು ಒಂದು ಉತ್ತಮ ಕಾರ್ಯ. ಕೆಲವೊಂದು ಸಂಧರ್ಭದಲ್ಲಿ ಉತ್ತಮ ರೀತಿಯಲ್ಲಿ ರೋಗದ ಮೂಲದ ಪತ್ತೆ ಕಾರ್ಯ ನಡೆಯದೆ ತಪ್ಪಾಗಿ ಚಿಕಿತ್ಸೆ ನಡೆದು ಮುಂದೆ ಸಮಸ್ಯೆ ಆಗುತ್ತದೆ. ಆ ನಿಟ್ಟಿನಲ್ಲಿ ಮಂಗಳೂರು ದೇಶದಲ್ಲಿಯೇ ಒಂದು ಮಾದರಿ ನಗರ ಎಂದು ನಾನು ನಂಬಿದ್ದೇನೆ. ಮಂಗಳೂರು ಒಂದು ಸಣ್ಣ ನಗರವಾದರೂ ವೈದ್ಯಕೀಯ ಕ್ಷೇತ್ರದಲ್ಲಿ ಮಾಡಿರುವ ಸಾಧನೆ ಅಸಾಮಾನ್ಯವಾದದ್ದು, ಅಂತಹದರಲ್ಲಿ ಮಂಗಳೂರಿನಲ್ಲಿ ಸ್ಥಾಪನೆಗೊಂಡ ಖಾಸಗಿ ವೈದ್ಯಕೀಯ ಸಂಸ್ಥೆಗಳು ಮತ್ತು ಖಾಸಗಿ ವೈದ್ಯಕೀಯ ಸಂಸ್ಥೆಯಲ್ಲಿ ಪಾಲ್ಗೊಂಡಿರುವ ವ್ಯಕ್ತಿಗಳು ಮತ್ತು ಡಾಕ್ಟರ್‌ಗಳು ಒಂದು ಮಾದರಿಯನ್ನೇ ಸೃಷ್ಟಿಸಿದ್ದಾರೆ ಎಂದರು.

# ಕಂಬಳ, ಮಲ್ಲ ಕಂಬಕ್ಕೆ ಕ್ರೀಡಾ ಪ್ರಾಧಿಕಾರದಿಂದ ಮಾನ್ಯತೆ: ಮಾಚಯ್ಯ



ಉಡುಪಿ : ರಾಜ್ಯ ಪ್ರಮುಖ ಕ್ರೀಡೆಗಳಾದ ಕಂಬಳ ಹಾಗೂ ಮಲ್ಲ ಕಂಬಕ್ಕೆ ಕರ್ನಾಟಕ ಕ್ರೀಡಾ ಪ್ರಾಧಿಕಾರದಿಂದ ಈಗಾಗಲೇ ಮಾನ್ಯತೆ ನೀಡಲಾಗಿದೆ. ಇದೇ ರೀತಿ ರಾಜ್ಯದಲ್ಲಿ ಕಬಡ್ಡಿ ಕ್ರೀಡೆಗೂ ಹೆಚ್ಚಿನ ಉತ್ತೇಜನ ನೀಡಬೇಕಾಗಿದೆ ಎಂದು ಕರ್ನಾಟಕ ಕ್ರೀಡಾ ಪ್ರಾಧಿಕಾರದ ಉಪಾಧ್ಯಕ್ಷ ಅರುಣ್ ಮಾಚಯ್ಯ ಹೇಳಿದ್ದಾರೆ. ಉಡುಪಿ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಹಾಗೂ ಉಡುಪಿ ಜಿಲ್ಲಾ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲರ ಸಂಘದ ಜಂಟಿ ಆಶ್ರಯದಲ್ಲಿ ಅಜ್ಜರಕಾಡುವಿನಲ್ಲಿರುವ ಉಡುಪಿ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಪದವಿ ಪೂರ್ವ ವಿದ್ಯಾರ್ಥಿಗಳ ಜಿಲ್ಲಾಮಟ್ಟದ ಕ್ರೀಡಾಕೂಟದ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡುತಿದ್ದರು. ಕ್ರೀಡೆಗೆ ಹೆಚ್ಚಿನ ಉತ್ತೇಜನ ನೀಡುವುದು ಕೇವಲ ಸರಕಾರ, ಇಲಾಖೆಗಳ ಜವಾಬ್ದಾರಿ ಮಾತ್ರವಲ್ಲ, ಪ್ರಾಂಶುಪಾಲರ ಕರ್ತವ್ಯ ಕೂಡ ಎಂಬುದನ್ನು ಈ ಕ್ರೀಡಾಕೂಟ ನಿರೂಪಿಸಿದೆ. ಪ್ರಾಂಶುಪಾಲರು ಸೇರಿ ಈ ಕ್ರೀಡಾಕೂಟವನ್ನು ಆಯೋಜಿಸುವ ಮೂಲಕ ಕ್ರೀಡೆಗೆ ಪ್ರೋತ್ಸಾಹ ನೀಡುತ್ತಿದ್ದಾರೆ. ಈ ರೀತಿಯ ಪ್ರೋತ್ಸಾಹದಿಂದಲೇ ಉಡುಪಿ ಜಿಲ್ಲೆ ಕ್ರೀಡೆಯಲ್ಲಿ ಯಾವತ್ತೂ ಹಿಂದೆ ಉಳಿದಿಲ್ಲ ಎಂದರು.

# ಸಪ್ತಾಚೆ ಸಾಂತ್‌ಗೆ ಶಾಸಕ ಕಾಮತ್‌ರಿಂದ ಉದ್ಘಾಟನೆ




ಮಂಗಳೂರು : ನಗರದ ವಿ.ಟಿ. ರಸ್ತೆಯಲ್ಲಿರುವ ಇತಿಹಾಸ ಪ್ರಸಿದ್ಧ ಶ್ರೀ ವಿಠೋಭ ರುಕುಮಾಯಿ ದೇವಸ್ಥಾನದ ಅಖಂಡ ಭಜನಾ ಸಪ್ತಾಹದ ಅಂಗವಾಗಿ ಗುಡಿ ಕೈಗಾರಿಕೆ, ಸಾವಯವ ಉತ್ಪನ್ನಗಳನ್ನು ಪ್ರೋತ್ಸಾಹಿಸುವ ಸಲುವಾಗಿ ಶ್ರೀ ವಿಠೋಭ ರುಕುಮಾಯಿ ದೇವಸ್ಥಾನದ ಆಡಳಿತ ಮಂಡಳಿಯ ಆಶ್ರಯದಲ್ಲಿ, ರಥಬೀದಿ ಶ್ರೀ ವೆಂಕಟರಮಣ ದೇವಸ್ಥಾನದ ಸಹಕಾರದಲ್ಲಿ ದೇವಳದ ಸನಿಹವಿರುವ ಶ್ರೀನಿವಾಸ ಕಲ್ಯಾಣ ಮಂಟಪದಲ್ಲಿ ಸಪ್ತಾಚೆ ಸಾಂತ್ ಕಾರ್ಯಕ್ರಮಕ್ಕೆ ದೀಪ ಬೆಳಗಿಸಿ ಚಾಲನೆ ನೀಡಲಾಯಿತು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಶಾಸಕ ವೇದವ್ಯಾಸ ಕಾಮತ್ ಸಪ್ತಾಚೆ ಸಾಂತ್ ಮೂಲಕ ಅಖಂಡ ಭಜನಾ ಸಪ್ತಾಹದ ಗತ ವೈಭವ ಮತ್ತೆ ಮರುಕಳಿಸಿದೆ. ಕಿರು ಮಧ್ಯಮ ವ್ಯಾಪಾರಿಗಳನ್ನು, ಉತ್ಪಾದಕರನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಎಲ್ಲಾ ನಾಗರಿಕರಿಗೆ ಇಲ್ಲಿ ಮುಕ್ತ ಪ್ರವೇಶವಿದೆ. ಬೆಳಿಗ್ಗೆ 10 ಗಂಟೆಯಿಂದ ರಾತ್ರಿ 10 ಗಂಟೆಯವರೆಗೆ ಒಂದು ವಾರ ಇಲ್ಲಿ ಸಿಗುವ ಉತ್ಪನ್ನಗಳನ್ನು ಖರೀದಿಸುವ ಮೂಲಕ ಸಾರ್ವಜನಿಕರು ಗುಡಿ ಕೈಗಾರಿಕೆಗಳನ್ನು ಪ್ರೋತ್ಸಾಹಿಸಬೇಕಿದೆ ಎಂದು ತಿಳಿಸಿದರು. ಶ್ರೀ ವೆಂಕಟರಮಣ ದೇವಸ್ಥಾನದ ಮೋಕ್ತೇಸರ ಸತೀಶ್ ಪ್ರಭು ಅವರು ಮಾತನಾಡಿ "ಪ್ರಧಾನಿ ಮೋದಿಯವರು ಕಂಡ ಕನಸು, ಇಟ್ಟುಕೊಂಡಿರುವ ಗುರಿ ದೇಶದಲ್ಲಿಯೇ ಉತ್ಪನ್ನಗಳನ್ನು ತಯಾರಿಸಿ ಸ್ವಾವಲಂಬಿ ಭಾರತವನ್ನು ನಿರ್ಮಿಸುವುದು. ಅದರಂತೆ ಇಲ್ಲಿ ಮನೆಗಳಲ್ಲಿಯೇ ತಯಾರಿಸಿದ ವಸ್ತುಗಳನ್ನು ಖರೀದಿಸುವ ಅವಕಾಶವನ್ನು ಈ ಸಂತೆ ನೀಡಿರುವುದು ಖುಷಿ ನೀಡಿದೆ" ಎಂದು ಹೇಳಿದರು.

# ಒಲಿಂಪಿಕ್ ಪದಕದಲ್ಲೂ ನಂಬರ್ ಒನ್ ಆಗಬೇಕು : ಸಿ.ಎಂ



ಮಂಗಳೂರು: ಜನಸಂಖ್ಯೆಯಲ್ಲಿ ದೇಶ ನಂಬರ್ ಒನ್. ಒಲಂಪಿಕ್ ಪದಕದಲ್ಲೂ ನಂಬರ್ ಒನ್ ಆಗಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರೆ ನೀಡಿದರು. ನ್ಯೂ ಉರ್ವ ಕ್ರೀಡಾಂಗಣದಲ್ಲಿ ನಡೆದ "ಚೀಫ್ ಮಿನಿಸ್ಟರ್-ಮಂಗಳೂರು ಇಂಡಿಯಾ ಇಂಟರ್ ನ್ಯಾಷನಲ್ ಚಾಲೆಂಜ್ 2025 ಪಂದ್ಯಾವಳಿ"ಯನ್ನು ಉದ್ಘಾಟಿಸಿ ಮಾತನಾಡಿ, ಒಲಂಪಿಕ್ಸ್, ಪ್ಯಾರಾ ಒಲಂಪಿಕ್ಸ್ ಸೇರಿ ಅಂತಾರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದವರಿಗೆ ರಾಜ್ಯ ಸರ್ಕಾರದ ಇಲಾಖೆಗಳಲ್ಲಿ ಎ ಗುಂಪಿನ ಹುದ್ದೆಗಳ ಜೊತೆಗೆ ಇತರೆ ಹುದ್ದೆಗಳನ್ನೂ ಮೀಸಲಿಟ್ಟಿದ್ದೇವೆ. ಆಧಿಖಕ ಸೇರಿ ಇತರೆ ಪೊಲೀಸ್ ಹುದ್ದೆಗಳಲ್ಲೂ ಶೇ2 ರಷ್ಟಿದ್ದ ಹುದ್ದೆ ಮೀಸಲಾತಿಯನ್ನು ಶೇ3 ಕ್ಕೆ ಹೆಚ್ಚಿಸಿದ್ದೇವೆ. ಜೊತೆಗೆ ಒಲಂಪಿಕ್‌ನಲ್ಲಿ ಪದಕ ತಂದು ರಾಜ್ಯದ, ರಾಷ್ಟ್ರದ ಕೀರ್ತಿ ಹೆಚ್ಚಿಸುವವರಿಗೆ 5 ಕೋಟಿ ರೂಪಾಯಿ ಬಹುಮಾನವನ್ನೂ ಘೋಷಿಸಿದ್ದೇನೆ. ಇನ್ನೂ ಅಗತ್ಯವಾದ ಅನುಕೂಲಗಳನ್ನೆಲ್ಲಾ ಮಾಡಿಕೊಡಲು ಸರ್ಕಾರ ಸಿದ್ಧವಿದೆ. ಒಟ್ಟಿನಲ್ಲಿ ನೀವು ಪದಕ ತನ್ನಿ ಎಂದು ಕ್ರೀಡಾಪಟುಗಳಿಗೆ ಕರೆ ನೀಡಿದರು. ವಿಶ್ವದ ಅತ್ಯಂತ ಜನಪ್ರಿಯ ಆಟಗಳಲ್ಲಿ ಬ್ಯಾಡ್ಮಿಂಟನ್ ಕೂಡ ಒಂದು. ಪ್ರಕಾಶ್ ಪಡುಕೋಣೆ, ಪುಲ್ಲೇಲ ಗೋಪಿಚಂದ್, ಸೈನಾ ನೆಹ್ವಾಲ್, ಪಿ.ವಿ.ಸಿಂಧು ಭಾರತೀಯ ಬ್ಯಾಡ್ಮಿಂಟನ್‌ಗೆ ಅಡಿಪಾಯ ಹಾಕಿ ದೇಶಕ್ಕೆ ಕೀರ್ತಿ ತಂದಿದ್ದಾರೆ ಎಂದು ಸಿ.ಎಂ.ಸಿದ್ದರಾಮಯ್ಯ ಅವರು ಮೆಚ್ಚುಗೆ ಸೂಚಿಸಿದರು. ಈ ಪಂದ್ಯಾವಳಿ ನಡೆಯುತ್ತಿರುವ ಈ ಉರ್ವ ಒಳಾಂಗಣ ಕ್ರೀಡಾಂಗಣಕ್ಕೆ ಶಂಕುಸ್ಥಾಪನೆ ಮಾಡಿದ್ದು ನಾನೇ, ಉದ್ಘಾಟನೆ ಕೂಡ ನಾನೇ ಮಾಡಿದೆ. ನಮ್ಮ ಸರ್ಕಾರದ್ದೇ ಹಣ. ಹಿಂದಿನ ಬಿಜೆಪಿ ಸರ್ಕಾರ ಈ ಕ್ರೀಡಾಂಗಣ ಪೂರ್ಣಗೊಳ್ಳಲು ಸಹಕಾರ ನೀಡಲಿಲ್ಲ. ಆದರೆ ಮತ್ತೆ ನಾನೇ ಮುಖ್ಯಮಂತ್ರಿ ಆಗಿ ಬಂದು ಒಟ್ಟು 38 ಕೋಟಿ ರೂಪಾಯಿಗಳನ್ನು ನೀಡಿ ಕ್ರೀಡಾಂಗಣ ಪೂರ್ಣಗೊಳಿಸಲಾಯಿತು ಎಂದು ವಿವರಿಸಿದರು.

# ಕಾಂಗ್ರೆಸ್‌ನ ಹಿಂದೂ ವಿರೋಧಿ ನೀತಿ : ಕ್ಯಾ. ಚೌಟ




ಮಂಗಳೂರು: ಕಾಂಗ್ರೆಸ್ ಸರಕಾರದ ಹಿಂದೂ ವಿರೋಧಿ ನೀತಿಯ ಮುಂದುವರಿದ ಭಾಗವಾಗಿ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಪ್ರಮುಖರು, ಹಿಂದುತ್ವದ ಪ್ರಬಲ ಧ್ವನಿ ಡಾ. ಕಲ್ಲಡ್ಕ ಪ್ರಭಾಕರ್ ಭಟ್ ಅವರ ಮೇಲೆ ರಾಜಕೀಯ ಪ್ರೇರಿತ ಮೊಕದ್ದಮೆ ಹೂಡಲಾಗಿದೆ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾ. ಬ್ರಿಜೇಶ್ ಚೌಟ ಅವರು ಆರೋಪಿಸಿದ್ದಾರೆ. ಹಿಂದೂ ಸಮಾಜದ ಆದರಣೀಯರಾಗಿರುವ ಡಾ. ಕಲ್ಲಡ್ಕ ಪ್ರಭಾಕರ್ ಭಟ್ ಅವರ ಬಗ್ಗೆ ಸಚಿವ ಪ್ರಿಯಾಂಕ ಖರ್ಗೆ ಅವರು ಕೇವಲವಾಗಿ ಮಾತಾಡಿರುವುದು ರಾಜ್ಯದ ಕಾಂಗ್ರೆಸ್ ಸರಕಾರಕ್ಕೆ ರಾಷ್ಟ್ರೀಯ ವಿಚಾರಧಾರೆಗಾಗಿ ಕೆಲಸ ಮಾಡುವವರ ಮೇಲೆ ಎಷ್ಟರಮಟ್ಟಿಗೆ ದ್ವೇಷವಿದೆ ಎಂಬುವುದನ್ನು ಸ್ಪಷ್ಟವಾಗಿ ಬಿಂಬಿಸುತ್ತದೆ. ಅವರ ಮೇಲಿನ ಮೊಕದ್ದಮೆಯು ಇದೇ ದ್ವೇಷದ ಮುಂದುವರಿದ ಭಾಗವಾಗಿದ್ದು, ರಾಷ್ಟ್ರೀಯ ವಿಚಾರಧಾರೆಗಾಗಿ ದುಡಿಯುವವರ ಧ್ವನಿಯನ್ನು ಅಡಗಿಸುವ ಪ್ರಯತ್ನ ಇದು. ಸಿಎಂ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಆಡಳಿತ ಯಂತ್ರವನ್ನು ದುರ್ಬಳಕೆ ಮಾಡಿಕೊಳ್ಳುವುದನ್ನೇ ಈಗ ಒಂದು ಛಾಳಿಯಾಗಿಸಿಕೊಂಡಿದೆ. ತಮ್ಮ ಸಿದ್ಧಾಂತ ಒಪ್ಪದವರನ್ನು ಆಡಳಿತದ ಕೋಲಿನಿಂದ ಹಣಿಯಲು ಯತ್ನಿಸುವುದು ಅಪಾಯಕಾರಿ. ಸಿದ್ಧಾಂತ ಪರ- ಭೇದಗಳನ್ನು ಎದುರಿಸುವ ಶಕ್ತಿ ವಾದ – ಪ್ರತಿವಾದದಲ್ಲಿರಬೇಕೇ ವಿನಹಃ ದ್ವೇಷದ ರಾಜಕಾರಣದಲ್ಲಿ ಅಲ್ಲ ಎಂದು ಕ್ಯಾ. ಚೌಟ ಹೇಳಿದ್ದಾರೆ.

# ಉರ್ವಾ ಮಾರ್ಕೆಟ್ ಕಟ್ಟಡಕ್ಕೆ ಭೇಟಿ ನೀಡಿದ ದಿನೇಶ್ ಗುಂಡೂರಾವ್



ಮಂಗಳೂರು: ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಅವರು ಉರ್ವಾ ನೂತನ ಮಾರುಕಟ್ಟೆ ಕಟ್ಟಡಕ್ಕೆ ಭೇಟಿ ನೀಡಿದರು. ಮಾರುಕಟ್ಟೆ ಕಟ್ಟಡದ ಒಳಗೆ ಹೋದ ಸಚಿವರು ಅಂಗಡಿ ಕೋಣೆಗಳು, ಮೀನು-ಮಾಂಸ ಮಾರಾಟ ಕೇಂದ್ರಗಳನ್ನು ವೀಕ್ಷಿಸಿದರು. ಮಾರುಕಟ್ಟೆ ಕಟ್ಟಡದಲ್ಲಿ ಅತಿ ಶೀಘ್ರವೇ ಚಟುವಟಿಕೆಗಳನ್ನು ಪುನರಾರಂಭಿಸಬೇಕು. ಅಂಗಡಿ ಕೋಣೆಗಳನ್ನು ಮಳಿಗೆದಾರರಿಗೆ ಹಸ್ತಾಂತರಿಸಬೇಕು. ವರ್ತಕರಿಗೆ ಅಗತ್ಯವಿರುವ ಸೌಲಭ್ಯಗಳನ್ನು ಕಲ್ಪಿಸಿಕೊಡಬೇಕು ಎಂದು ನಗರ ಪಾಲಿಕೆ ಅಧಿಕಾರಿಗಳಿಗೆ ಅವರು ಸೂಚಿಸಿದರು. ಅಗತ್ಯವಿದ್ದರೆ ಟೆಂಡರ್ ಶರತ್ತುಗಳನ್ನು ಸಡಿಲಗೊಳಿಸಬೇಕು. ತಾತ್ಕಾಲಿಕ ಮಾರುಕಟ್ಟೆಯಲ್ಲಿರುವ ಎಲ್ಲಾ ಮಳಿಗೆಗಳನ್ನು ನೂತನ ಮಾರುಕಟ್ಟೆಗೆ ಸ್ಥಳಾಂತರಿಸಬೇಕು ಎಂದು ಸಚಿವರು ಸೂಚಿಸಿದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಐವನ್ ಡಿಸೋಜಾ, ಜಿಲ್ಲಾಧಿಕಾರಿ ದರ್ಶನ್ ಹೆಚ್.ವಿ, ಮಹಾನಗರಪಾಲಿಕೆ ಆಯುಕ್ತ ರವಿಚಂದ್ರ ನಾಯಕ್ ಮತ್ತಿತರರು ಉಪಸ್ಥಿತರಿದ್ದರು.

# ಕುಂಜತ್ತಬೈಲ್ ಲೇಔಟ್‌ನ ಮೂಲ ಸೌಕರ್ಯ ಅಭಿವೃದ್ಧಿಪಡಿಸಲು ಸೂಚನೆ



ಮಂಗಳೂರು: ಜಾಗತಿಕ ಬಂಟರ ಸಂಘಗಳ ಒಕ್ಕೂಟದ ಮೂಲ್ಕಿಯ ಡಾ.ಕನ್ಯಾನ ಸದಾಶಿವ ಶೆಟ್ಟಿ ಸಂಕೀರ್ಣದ ಶ್ರೀ ಪ್ರವೀಣ್ ಭೋಜ ಶೆಟ್ಟಿ ಆಡಳಿತ ಕಚೇರಿಗೆ ಬಿಲ್ಲವ ಮಹಾಮಂಡಲದ ಅಧ್ಯಕ್ಷರು ಮತ್ತು ಭಾರತ್ ಕೋಪರೇಟಿವ್ ಬ್ಯಾಂಕ್‌ನ ಅಧ್ಯಕ್ಷರಾದ ಸೂರ್ಯಕಾಂತ್ ಜೆ ಸುವರ್ಣ ಇವರು ಭೇಟಿ ನೀಡಿದ ಸಂದರ್ಭ ಅವರನ್ನು ಒಕ್ಕೂಟದ ಅಧ್ಯಕ್ಷರಾದ ಐಕಳ ಹರೀಶ್ ಶೆಟ್ಟಿಯವರು ಮತ್ತು ಪದಾಧಿಕಾರಿಗಳು ಸನ್ಮಾನಿಸಿ ಗೌರವಿಸಿದರು. ಸೂರ್ಯಕಾಂತ್ ಜೆ ಸುವರ್ಣ ಅವರು ಬಿಲ್ಲವ ಮಹಾಮಂಡಲದ ಅಧ್ಯಕ್ಷರಾಗಿ ಉತ್ತಮ ಕೆಲಸ ಕಾರ್ಯಗಳನ್ನು ಮಾಡಲಿ ಎಂದು ಐಕಳ ಹರೀಶ್ ಶೆಟ್ಟಿ ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಒಕ್ಕೂಟದ ಉಪಾಧ್ಯಕ್ಷರಾದ ಕರ್ನಿರೆ ವಿಶ್ವನಾಥ ಶೆಟ್ಟಿ, ಕಾರ್ಯದರ್ಶಿ ಜಯಕರ್ ಶೆಟ್ಟಿ ಇಂದ್ರಾಳಿ ಜೊತೆ ಕಾರ್ಯದರ್ಶಿ ಚಂದ್ರಹಾಸ ಶೆಟ್ಟಿ ರಂಗೋಲಿ, ಪೋಷಕರಾದ ಗಿರೀಶ್ ಶೆಟ್ಟಿ ತೆಳ್ಳಾರ್, ಮಾಜಿ ಕೋಶಾಧಿಕಾರಿ ಕೊಲ್ಲಾಡಿ ಬಾಲಕೃಷ್ಣ ರೈ, ಕಂಟ್ರಾಕ್ಟರ್ ಶಿವಪ್ರಸಾದ ರೈ, ರವಿರಾಜ್ ಶೆಟ್ಟಿ ಜತ್ತಬೆಟ್ಟು, ಸೂರ್ಯಕಾಂತ್ ಸುವರ್ಣ ರವರ ಅಭಿಮಾನಿಗಳಾದ ಮೋಹನ್ ಕೋಟ್ಯಾನ್, ಯೋಗೀಶ್ ಕೋಟ್ಯಾನ್, ಭಾಸ್ಕರ್ ಸಾಲ್ಯಾನ್ ಉಪಸ್ಥಿತರಿದ್ದರು.

# ಸುದ್ದಿ ತುಣುಕು

ಆರ್‌ಟಿಐ ಕಾರ್ಯಕರ್ತ ಶಕ್ತಿಕುಮಾರ್ ಅವರು ಕಳಪೆ ಕಾಮಗಾರಿ ಎಂದು ಆರೋಪಿಸಿ ನೀಡಿದ ದೂರಿನ ಹಿನ್ನೆಲೆ, ಬೆಂಗಳೂರಿನ ಲೋಕಾಯುಕ್ತ ಅಧಿಕಾರಿಗಳು ಹಾವೇರಿಗೆ ಆಗಮಿಸಿ ಎಜೆಜೆ ಕನ್‌ಸ್ಟ್ರಕ್ಷನ್ಸ್ ಕಂಪನಿ ನಿರ್ಮಾಣ ಮಾಡುತ್ತಿರುವ ಮನೆಗಳ ಕಾಮಗಾರಿ ಪರಿಶೀಲನೆ ನಡೆಸಿದರು.

ಮೆಟ್ರೋ ರೈಲು ಸೇವೆಯಲ್ಲಿ ವ್ಯತ್ಯಯ ಉಂಟಾಗಿದ್ದರಿಂದ ಪ್ರಯಾಣಿಕರು ತೊಂದರೆ ಎದುರಿಸುವಂತಾಯಿತು.

ವಿಜಯ್ ಮಲ್ಯ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಲಲಿತಾ ಕನ್ನೆಗಂಟೆ ಅವರಿದ್ದ ಏಕಸದಸ್ಯ ಪೀಠ, ಅರ್ಜಿದಾರರು ಬೇಕಿದ್ದರೆ ಕಂಪನಿ ನ್ಯಾಯಾಧಿಕರಣದ ಮುಂದೆ ತಮ್ಮ ಮನವಿಯನ್ನು ಅರ್ಜಿಯ ಮೂಲಕ ಸಲ್ಲಿಸಬಹುದಾಗಿದೆ ಎಂದು ಪೀಠ ಹೇಳಿದೆ.

ಸರಗೂರು ತಾಲೂಕಿನ ಬೆಣ್ಣೆಗೆರೆ ಗ್ರಾಮದ ಜಮೀನಿನಲ್ಲಿ, ರೈತನ ಬಲಿ ಪಡೆದ ಹುಲಿ ಸೆರೆಗೆ 130ಕ್ಕೂ ಹೆಚ್ಚು ಸಿಬ್ಬಂದಿ ಠಿಕಾಣಿ ಹೂಡಿದ್ದಾರೆ.

ಲಕ್ಷ್ಮಣ ಸವದಿ ನನ್ನ ಮೇಲೆ ಗಂಭೀರ ಆರೋಪ ಮಾಡುತ್ತಿದ್ದಾರೆ. ಸುಖಾ-ಸುಮ್ಮನೆ ಆರೋಪ ಮಾಡಿದರೆ ಕಾನೂನು ಹೋರಾಟ ಪ್ರಕ್ರಿಯೆ ಪ್ರಾರಂಭಿಸುತ್ತೇನೆ ಎಂದು ಗಜಾನನ ಮಂಗಸುಳಿ ಎಚ್ಚರಿಕೆ ನೀಡಿದ್ದಾರೆ.

ರಾಜ್ಯದಲ್ಲಿ ಈಗ ಚರ್ಚೆಯಲ್ಲಿರುವ ಯಾವ ನಾಯಕರೂ ಮುಂದಿನ ಮುಖ್ಯಮಂತ್ರಿ ಆಗುವುದಿಲ್ಲ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಭವಿಷ್ಯ ನುಡಿದಿದ್ದಾರೆ.

ಶಾಸಕರಿಗೆ ನೀಡಲಾಗುವ ಅನುದಾನ ಹಂಚಿಕೆಯಲ್ಲಿ ತಾರತಮ್ಯ ಮಾಡಲಾಗಿದೆ ಎಂದು ಆರೋಪಿಸಿ ಸಲ್ಲಿಕೆಯಾಗಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಪೀಠ, ಸರ್ಕಾರಕ್ಕೆ ನೋಟಿಸ್ ನೀಡಿದೆ.

ರಾಷ್ಟ್ರಗೀತೆ ಕಡೆಗಣನೆ, ದಸರಾ ರಜೆ ಮೊಟಕು ಸೇರಿದಂತೆ ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿಯ ಖಾಸಗಿ ಶಾಲೆಯೊಂದರಲ್ಲಿ ಹಲವು ಅಹಿತಕರ ಮತ್ತು ಅನುಚಿತ ಸಂಗತಿಗಳು ನಡೆದಿವೆ ಎಂದು ಆರೋಪಿಸಿ ಶಾಲೆಯ ಇಬ್ಬರು ವಿದ್ಯಾರ್ಥಿಗಳು ಹೈಕೋರ್ಟ್ ಮೆಟ್ಟಿಲೇರಿದ್ದಾರೆ.

ಮೊಂಥಾ ಚಂಡಮಾರುತದ ಹೊಡೆತಕ್ಕೆ ಆಂಧ್ರ ಪ್ರದೇಶದಲ್ಲಿ 87,000 ಹೆಕ್ಟೇರ್ ಬೆಳೆ ಹಾನಿಯಾಗಿದೆ.

# ಮಟನ್ ಚಾಪ್ಸ್



**ಬೇಕಾಗುವ ಸಾಮಾಗ್ರಿಗಳು :**

ಮಟನ್ ಚಾಪ್ಸ್ – 500 ಗ್ರಾಂ
ಈರುಳ್ಳಿ – 2
ಹಸಿರು ಮೆಣಸಿನಕಾಯಿ – 8
ಕರಿ ಮೆಣಸು 1 ಚಮಚ
ಚಕ್ಕೆ – ಸ್ವಲ್ಪ
ಲವಂಗ – 4
ಕಡಲೆಕಾಳು – 2 ಚಮಚ
ಪುದೀನ ಎಲೆ – 1/4 ಕಪ್
ಕೊತ್ತಂಬರಿ ಸೊಪ್ಪು – 1/4 ಕಪ್
ಶುಂಠಿ ಸ್ವಲ್ಪ
ಬೆಳ್ಳುಳ್ಳಿ – 20 ಎಸಳು
ಅರಿಶಿನ ಪುಡಿ – 2 ಚಮಚ
ತೆಂಗಿನ ತುರಿ – 2/1 ಕಪ್
ಎಣ್ಣೆ – 4 ಚಮಚ
ಮೆಣಸಿನ ಪುಡಿ – 1 ಚಮಚ
ಕೊತ್ತಂಬರಿ ಪುಡಿ – 1 ಚಮಚ
ಅಗತ್ಯವಿರುವಷ್ಟು ಉಪ್ಪು

**ಮಾಡುವ ವಿಧಾನ :**

ಮಟನ್ ಚಾಪ್ಸ್ ಅನ್ನು ಚೆನ್ನಾಗಿ ತೊಳೆದು, ನೀರು ಉಳಿಯದಂತೆ ಸೋಸಿ, ಅದನ್ನು ಪ್ರೆಶರ್ ಕುಕ್ಕರ್‌ನಲ್ಲಿ ಹಾಕಿ, ಮಟನ್ ಚಾಪ್ಸ್ ಜೊತೆಗೆ ಚಿಟಿಕೆ ಅರಿಶಿನ ಪುಡಿ, ಸ್ವಲ್ಪ ಉಪ್ಪು, ಎಣ್ಣೆ ಮತ್ತು ಅರ್ಧ ಕಪ್ ನೀರು ಸೇರಿಸಿ, ಚೆನ್ನಾಗಿ ಮಿಶ್ರಣ ಮಾಡಿ 4-5 ಸೀಟಿ ಬರುವವರೆಗೆ ಅದನ್ನು ಬೇಯಿಸಬೇಕು. ಈಗ ಒಂದು ಬಾಣಲೆಯಲ್ಲಿ ಒಂದು ಚಮಚ ಎಣ್ಣೆ ಹಾಕಿ, ಎಣ್ಣೆ ಕಾದ ನಂತರ ಒಂದು ಹೆಚ್ಚಿಕೊಂಡ ಈರುಳ್ಳಿ, 6 ಹಸಿರು ಮೆಣಸಿನಕಾಯಿ ಮತ್ತು ಕರಿಮೆಣಸು ಸೇರಿಸಿ ಈರುಳ್ಳಿ ಕಂದು ಬಣ್ಣ ಬರುವವರೆಗೆ ಫ್ರೈ ಮಾಡಿಕೊಂಡು, ಅದು ತಣ್ಣದಾದ ನಂತರ ಮಿಕ್ಸಿಗೆ ಹಾಕಿಕೊಂಡು, ಅದಕ್ಕೆ ದಾಲ್ಚಿನ್ನಿ, ಲವಂಗ, ಕಡಲೆಕಾಯಿ, ಪುದೀನ, ಕೊತ್ತಂಬರಿ ಸೊಪ್ಪು, ಶುಂಠಿ, ಬೆಳ್ಳುಳ್ಳಿ, ತುರಿದ ತೆಂಗಿನಕಾಯಿ ಮತ್ತು ಅರಿಶಿನ ಪುಡಿ ಹಾಕಿ ಸ್ವಲ್ಪ ನೀರು ಸೇರಿಸಿ ದಪ್ಪವಾದ ಪೇಸ್ಟ್ ರೀತಿ ರುಬ್ಬಿಕೊಳ್ಳಬೇಕು. ಈಗ ಒಂದು ಪಾತ್ರೆಯಲ್ಲಿ ಎರಡರಿಂದ ಮೂರು ಚಮಚ ಎಣ್ಣೆಯನ್ನು ಹಾಕಿ, ಎಣ್ಣೆ ಕಾದ ನಂತರ ಒಂದು ಹೆಚ್ಚಿಕೊಂಡ ಈರುಳ್ಳಿ ಮತ್ತು 2 ಹಸಿರು ಮೆಣಸಿನಕಾಯಿಯನ್ನು ಹಾಕಿ ಮಧ್ಯಮ ಉರಿಯಲ್ಲಿ ಫ್ರೈ ಮಾಡಿ. ಅದಕ್ಕೆ ಬೇಯಿಸಿದ ಮಟನ್ ಮತ್ತು ರಸವನ್ನು ಪಾತ್ರೆಯಲ್ಲಿ ಹಾಕಬೇಕು. ನಂತರ ಅದಕ್ಕೆ ರುಬ್ಬಿದ ಮಸಾಲಾ ಪೇಸ್ಟ್ ಸೇರಿಸಿ, ಕೊತ್ತಂಬರಿ ಪುಡಿ ಮತ್ತು ಮೆಣಸಿನ ಪುಡಿ ಮತ್ತು ರುಚಿಗೆ ತಕ್ಕಷ್ಟು ಉಪ್ಪು ಸೇರಿಸಿ. ಚೆನ್ನಾಗಿ ಮಿಶ್ರಣ ಮಾಡಿ ಮುಚ್ಚಳವನ್ನು ಹಾಕಿ ಮಧ್ಯಮ ಉರಿಯಲ್ಲಿ 15-20 ನಿಮಿಷಗಳ ಕಾಲ ಬೇಯಿಸಬೇಕು. ನಂತರ ಮತ್ತೊಮ್ಮೆ ಮಿಶ್ರಣ ಮಾಡಿದರೆ ರುಚಿಯಾದ ಮಟನ್ ಚಾಪ್ಸ್ ಸವಿಯಲು ಸಿದ್ಧ.

# ಶಾಂತಿ ಮಾತುಕತೆ ವಿಫಲವಾಗಲು ಭಾರತವೇ ಕಾರಣ : ಪಾಕ್



ಇಸ್ಲಮಾಬಾದ್: ಟರ್ಕಿಯ ರಾಜಧಾನಿ ಇಸ್ತಾಂಬುಲ್‌ನಲ್ಲಿ ನಡೆದ ಪಾಕಿಸ್ತಾನ ಹಾಗೂ ಅಫ್ಘಾನಿಸ್ತಾನದ ನಡುವಿನ ಕದನ ವಿರಾಮದ ಮಾತುಕತೆ ವಿಫಲವಾದ ಬೆನ್ನಲ್ಲೇ ಪಾಕಿಸ್ತಾನದ ರಕ್ಷಣಾ ಸಚಿವ ಖವಾಜಾ ಆಸೀಫ್ ಅಫ್ಘಾನಿಸ್ತಾನದ ಮೇಲೆ 50 ಪಟ್ಟು ಹೆಚ್ಚಾಗಿ ದಾಳಿ ನಡೆಸುತ್ತೇವೆ ಎಂದು ಎಚ್ಚರಿಕೆ ನೀಡುವ ಜೊತೆಗೆ ಅಫ್ಘಾನಿಸ್ತಾನ ಭಾರತದ ಕೈಗೊಂಬೆಯಂತೆ ವರ್ತಿಸುತ್ತಿದೆ ಎಂದು ಟೀಕೆ ಮಾಡಿದ್ದಾರೆ. ಪ್ರತಿ ಬಾರಿ ಭಾರತದ ಹಸ್ತಕ್ಷೇಪದಿಂದ ನಾವು ಒಪ್ಪಂದ ಹಿಂತೆಗೆದುಕೊಳ್ಳುವಂತೆ ಮಾಡುತ್ತಿದ್ದಾರೆ ಎಂದು ಭಾರತದ ವಿರುದ್ಧ ಆರೋಪಿಸಿದ್ದಾರೆ. ಈ ಹಿಂದೆಯೂ ಪಾಕ್-ಅಫ್ಘಾನ್ ನಡುವಿನ ಸಂಘರ್ಷಕ್ಕೆ ಭಾರತವೇ ಕಾರಣ ಎಂದು ಆರೋಪಿಸಿದ್ದ ಪಾಕ್, ಅಫ್ಘಾನ್ ಭಾರತದ ಪರ 'ಪ್ರಾಕ್ಸಿ ವಾರ್' ನಡೆಸುತ್ತಿದೆ ಎಂದು ಹೇಳಿತ್ತು.

# ರಷ್ಯಾದ ಟ್ಯಾಂಕರ್ ಹಡಗು ಬಾಲ್ಟಿಕ್ ಸಮುದ್ರದಲ್ಲಿ ಯು – ಟರ್ನ್

ನವದೆಹಲಿ : ರಷ್ಯಾದಿಂದ ಕಚ್ಚಾ ತೈಲ ತುಂಬಿದ ಭಾರತಕ್ಕೆ ಬರುತ್ತಿದ್ದ ಟ್ಯಾಂಕರ್ ಹಡಗು, ತನ್ನ ಹಾದಿಯನ್ನು ಹಿಮ್ಮುಖಗೊಳಿಸಿ ಬಾಲ್ಟಿಕ್ ಸಮುದ್ರದಲ್ಲಿ ನಿಷ್ಕ್ರಿಯವಾಗಿ ನಿಂತಿದೆ. ಇದು ಮಾಸ್ಕೋ ಮೇಲೆ ಅಮೆರಿಕ ನಿರ್ಬಂಧಗಳನ್ನ ಬಿಗಿಗೊಳಿಸಿದ ನಂತರ ಎರಡೂ ದೇಶಗಳ ನಡುವಿನ ತೈಲ ವ್ಯಾಪಾರದಲ್ಲಿ ಸಂಭಾವ್ಯ ಅಡ್ಡಿಯಾಗುವ ಸಂಕೇತವಾಗಿದೆ. ಪ್ಯೂರಿಯಾ ಡೆನ್ಮಾರ್ಕ್ ಮತ್ತು ಜರ್ಮನ್ ನಡುವಿನ ಜಲಸಂಧಿಯಲ್ಲಿ ಪಶ್ಚಿಮಕ್ಕೆ ಚಲಿಸುತ್ತಿದ್ದಾಗ ಮಂಗಳವಾರ ತಿರುಗಿ ಸ್ವಲ್ಪ ದೂರ ಸಾಗಿ ನಂತರ ತೀವ್ರವಾಗಿ ನಿಧಾನವಾಯಿತು ಎಂದು



ಹಡಗು ಟ್ರ್ಯಾಕಿಂಗ್ ದತ್ತಾಂಶ ತೋರಿಸಿದೆ. ಕೆಪ್ಲರ್ ಪ್ರಕಾರ, ಅಫ್ರಾಮ್ಯಾಕ್ಸ್ ರೋಸ್ನೆಫ್ಟ್ ಪಿಜೆಎಸ್‌ಸಿ ಮಾರಾಟ ಮಾಡಿದ ಸರಕುಗಳನ್ನು ಸಾಗಿಸುತ್ತಿದೆ.

# ಇಸ್ತಾಂಬುಲ್‌ನಲ್ಲಿ ಅಫ್ಘಾನಿಸ್ತಾನ ಮತ್ತು ಪಾಕಿಸ್ತಾನ ಶಾಂತಿ ಮಾತುಕತೆ ವಿಫಲ



ಇಸ್ತಾಂಬುಲ್: ರೋಗಿ ಬಯಸಿದ್ದೂ ಹಾಲು-ಅನ್ನ, ವೈದ್ಯರು ಹೇಳಿದ್ದೂ ಹಾಲು-ಅನ್ನ ಎಂಬಂತೆ, ಸದಾ ಯುದ್ಧವನ್ನೇ ಬಯಸುವ ಪಾಕಿಸ್ತಾನಕ್ಕೆ ಅಫ್ಘಾನಿಸ್ತಾನದೊಂದಿಗಿನ 'ಓಪನ್ ವಾರ್' ಮುಂದುವರೆಸುವ ಅವಕಾಶ ದೊರೆತಿದೆ. ಏಕೆಂದರೆ ಟರ್ಕಿ ರಾಜಧಾನಿ ಇಸ್ತಾಂಬುಲ್‌ನಲ್ಲಿ ಉಭಯ ರಾಷ್ಟ್ರಗಳ ನಡುವೆ ನಡೆದಿದ್ದ ಶಾಂತಿ ಮಾತುಕತೆ ವಿಫಲವಾಗಿದೆ. ಡ್ಯುರಾಂಡ್ ಲೈನ್ ಗಡಿ ವಿವಾದಕ್ಕೆ ಸಂಬಂಧಿಸಿದಂತೆ ದೀರ್ಘಾವಧಿಯ ಒಪ್ಪಂದವನ್ನು ಸ್ಥಾಪಿಸಲು, ಅಫ್ಘಾನಿಸ್ತಾನ ಮತ್ತು ಪಾಕಿಸ್ತಾನದ ನಡುವೆ ನಡೆದಿದ್ದ ಶಾಂತಿ ಮಾತುಕತೆಗಳು ವಿಫಲವಾಗಿವೆ. ಈ ಕುರಿತು ಉಭಯ ಬಣಗಳ ಅಧಿಕೃತ ಹೇಳಿಕೆಯನ್ನು ಬಿಡುಗಡೆ ಮಾಡಿದ್ದು, ಶಾಂತಿ ಮಾತುಕತೆ ವೈಫಲ್ಯಕ್ಕೆ ಪರಸ್ಪರರನ್ನು ದೂಷಿಸಿವೆ.

# 'ಪ್ಲುಟೋನಿಯಂ ವಿಲೇವಾರಿ' ಒಪ್ಪಂದ ರದ್ದುಗೊಳಿಸಿದ ಪುಟಿನ್

ಮಾಸ್ಕೋ: ಪರಮಾಣು ಶಸ್ತ್ರಾಸ್ತ್ರ ದರ್ಜೆಯ ವಸ್ತುಗಳ ಉತ್ಪಾದನೆಯನ್ನು ಸೀಮಿತಗೊಳಿಸುವ ಉದ್ದೇಶದಿಂದ ಈಗಾಗಲೇ ನಿಷ್ಕ್ರಿಯವಾಗಿರುವ ಪ್ಲುಟೋನಿಯಂ ವಿಲೇವಾರಿ ಒಪ್ಪಂದವನ್ನು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ರದ್ದುಗೊಳಿಸುವ ಕಾನೂನಿಗೆ ಸಹಿ ಹಾಕಿದ್ದಾರೆ ಎಂದು ಆರ್ಟ ವರದಿ ಮಾಡಿದೆ. ಸಂಸತ್ತಿನ ಕೆಳಮನೆ ಈ ತಿಂಗಳ ಆರಂಭದಲ್ಲಿ ಮಸೂದೆಯನ್ನು ಅನುಮೋದಿಸಿದರೆ, ಫೆಡರೇಷನ್ ಕೌನ್ಸಿಲ್, ಮೇಲ್ಮನೆ ಕಳೆದ ಬುಧವಾರ ತನ್ನ ಒಪ್ಪಿಗೆಯನ್ನು ನೀಡಿತು. ಪುಟಿನ್ ಅವರ



ಅನುಮೋದನೆಯ ನಂತರ ಸೋಮವಾರದಿಂದ ಈ ಶಾಸನ ಜಾರಿಗೆ ಬಂದಿದೆ.

# 'ಬ್ಯೂರೆವೆಸ್ಟ್ನಿಕ್' ಕ್ಷಿಪಣಿ ಪರೀಕ್ಷೆಯಿಂದ ತತ್ತರಿಸಿ ಸ್ವರ ಬದಲಿಸಿದ ಟ್ರಂಪ್



ಮಾಸ್ಕೋ : ರಷ್ಯಾ-ಉಕ್ರೇನ್ ಯುದ್ಧದ ನಡುವೆ, ರಷ್ಯಾದ ಸೇನೆಯು 'ಬ್ಯೂರೆವೆಸ್ಟ್ನಿಕ್' ಕ್ಷಿಪಣಿಯನ್ನು ಪರೀಕ್ಷಿಸಿದೆ. ಇದರ ಬೆನ್ನಲ್ಲೇ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರಿಗೆ ನೇರ ಎಚ್ಚರಿಕೆ ನೀಡಿದ್ದಾರೆ. ಈ ಹಿಂದೆ ನಿರ್ಬಂಧಗಳನ್ನು ವಿಧಿಸುತ್ತಾ ಮತ್ತು ರಷ್ಯಾಕ್ಕೆ ಬೆದರಿಕೆ ಹಾಕುತ್ತಿದ್ದ ಟ್ರಂಪ್, ಈಗ ತಮ್ಮ ಸ್ವರ ಬದಲಾಯಿಸಿದ್ದಾರೆ. ಹೊಸ ಕ್ಷಿಪಣಿಗಳನ್ನು ಪರೀಕ್ಷಿಸುವ ಬದಲು ಉಕ್ರೇನ್ ಯುದ್ಧವನ್ನು ಕೊನೆಗೊಳಿಸುವತ್ತ ಗಮನಹರಿಸುವಂತೆ ಅವರು ಪುಟಿನ್ ಅವರನ್ನು ಒತ್ತಾಯಿಸಿದ್ದಾರೆ. ರಷ್ಯಾದ ಈ ಕ್ಷಿಪಣಿ ಅಮೆರಿಕದಿಂದ ಯುರೋಪ್ ವರೆಗೆ ಮಾತ್ರವಲ್ಲದೆ ಇಡೀ ಜಗತ್ತಿನಲ್ಲಿ ಭೀತಿಯನ್ನು ಸೃಷ್ಟಿಸಿದೆ.

# ಥೈಲ್ಯಾಂಡ್‌ನ ಮಾಜಿ ರಾಣಿ ನಿಧನ

ಥೈಲ್ಯಾಂಡ್‌ನ ಮಾಜಿ ರಾಣಿ ಸಿರಿಕಿತ್ ತನ್ನ 93 ನೇ ವಯಸ್ಸಿನಲ್ಲಿ ಬ್ಯಾಂಕಾಕ್‌ನ ಆಸ್ಪತ್ರೆಯಲ್ಲಿ ನಿಧನರಾದರು ಎಂದು ರಾಯಲ್ ಹೌಸ್ ಹೋಲ್ಡ್ ಬ್ಯೂರೋ ಪ್ರಕಟಿಸಿದೆ. ಸಿರಿಕಿತ್ ಅನಾರೋಗ್ಯದಿಂದ ಬಳಲುತ್ತಿದ್ದರು ಮತ್ತು ಅಕ್ಟೋಬರ್ 17 ರಿಂದ ರಕ್ತದ ಸೋಂಕಿನೊಂದಿಗೆ ಹೋರಾಡುತ್ತಿದ್ದರು, ಚಿಕಿತ್ಸೆ ಫಲಕಾರಿಯಾಗದೆ ಸಾವನ್ನಪ್ಪಿದ್ದಾರೆ. ಇತ್ತೀಚಿನ ವರ್ಷಗಳಲ್ಲಿ ಅನಾರೋಗ್ಯದ ಕಾರಣದಿಂದಾಗಿ ಸಿರಿಕಿತ್ ಸಾರ್ವಜನಿಕ ಜೀವನದಿಂದ ದೂರವಿದ್ದರು. ಅವರ ಪತಿ ದಿವಂಗತ ರಾಜ ಭೂಮಿಬೋಲ್ ಅದುಲ್ಯದೇಜ್ ಅಕ್ಟೋಬರ್ 2016 ರಲ್ಲಿ




ನಿಧನರಾದರು. ಸಿರಿಕಿತ್ ಅವರನ್ನು ಜನ ಎಷ್ಟು ಗೌರವಿಸುತ್ತಾರೆಂದರೆ, ಅವರ ಜನ್ಮದಿನವಾದ ಆಗಸ್ಟ್ 12 ಅನ್ನು ಥೈಲ್ಯಾಂಡ್‌ನಲ್ಲಿ ತಾಯಂದಿರ ದಿನವಾಗಿ ಆಚರಿಸಲಾಗುತ್ತದೆ.

# ಮಂಗಳೂರಿನಲ್ಲಿ ಅಂತಾರಾಷ್ಟ್ರೀಯ ಬ್ಯಾಡ್ಮಿಂಟನ್



ಮಂಗಳೂರು: ರಾಜ್ಯದಲ್ಲೇ ಪ್ರಥಮ ಬಾರಿಗೆ ಚೀಫ್ ಮಿನಿಸ್ಟರ್ಸ್ ಮಂಗಳೂರು ಇಂಡಿಯಾ ಇಂಟರ್ ನ್ಯಾಷನಲ್ ಚಾಲೆಂಜ್ 2025 ಅಂತಾರಾಷ್ಟ್ರೀಯ ಬ್ಯಾಡ್ಮಿಂಟನ್ ಪಂದ್ಯಾವಳಿ ಉರ್ವ ಒಳಾಂಗಣ ಕ್ರೀಡಾಂಗಣದಲ್ಲಿ ನಡೆಯುತ್ತಿದೆ. ಸಿಎಂ ಸಿದ್ದರಾಮಯ್ಯ ಪಂದ್ಯಾವಳಿಗೆ ಚಾಲನೆ ನೀಡಿದರು. ಯುರೋಪ್, ಅಮೇರಿಕ, ರಷ್ಯಾ, ಯುಎಇ, ಮಲೇಷ್ಯಾ, ಕೆನಡಾ, ಇಂಡೋನೇಷ್ಯಾ, ಶ್ರೀಲಂಕಾ, ಥಾಯ್ಲೆಂಡ್, ಬಾಂಗ್ಲಾದೇಶ, ಸಿಂಗಾಪುರ, ಇಂಗ್ಲೆಂಡ್, ಭಾರತ ಸೇರಿದಂತೆ 12 ದೇಶಗಳ 450 ಕ್ರೀಡಾಪಟುಗಳು ಭಾಗವಹಿದ್ದಾರೆ, ದೇಶದ 350 ಮತ್ತು ವಿದೇಶದ 100ರಷ್ಟು ಸ್ಪರ್ಧಿಗಳು ಪಾಲ್ಗೊಳ್ಳಲಿದ್ದಾರೆ. ಮುಖ್ಯ ರೆಫ್ರಿ ಮಾಲ್ಡಿವ್ಸ್ ನವರಾಗಿದ್ದು, ವಿಶ್ವದ ವಿವಿಧ ದೇಶಗಳಿಂದ 200ರಷ್ಟು ತಂತ್ರಜ್ಞರು, ಅಧಿಕಾರಿಗಳು ಭಾಗವಹಿಸುತ್ತಿದ್ದಾರೆ.


# ಮಕ್ಕಳು ದೇವರ ಸಮಾನ : ಸಚಿವ ಮಧು ಬಂಗಾರಪ್ಪ



ಬೆಂಗಳೂರು: "ಮಕ್ಕಳು ದೇವರ ಸಮಾನ, ಅವರ ಸೇವೆ ಮಾಡುವುದೇ ನಮ್ಮ ಭಾಗ್ಯ. ರಾಜಕಾರಣದಲ್ಲಿ ಟೀಕೆ-ಟಿಪ್ಪಣಿಗಳನ್ನು ಸ್ವೀಕರಿಸುವ ಮನೋಭಾವ ಬೆಳಸಿಕೊಳ್ಳಬೇಕು" ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಾದ ಶ್ರೀ ಮಧು ಬಂಗಾರಪ್ಪ ಹೇಳಿದರು. "ನಾನು ಸಾಕಷ್ಟು ಚುನಾವಣೆಗಳನ್ನು ಎದುರಿಸಿದ್ದೇನೆ, ಬಹುತೇಕಲ್ಲಿ ಸೋತಿದ್ದೇನೆ. ಆದರೆ ಸೋಲು ಜೀವನದಲ್ಲಿ ಪಾಠ ಕಲಿಸುತ್ತದೆ. ಯುವಕರು ರಾಜಕೀಯದಲ್ಲಿ ಆಸಕ್ತಿ ತೋರಬೇಕು. ಈ ರೀತಿಯ ಸ್ಪರ್ಧೆಗಳು ನಿಮ್ಮ ಚರ್ಚಾ ಮನೋಭಾವ ಮತ್ತು ಭವಿಷ್ಯಕ್ಕೆ ಸಹಕಾರಿಯಾಗುತ್ತದೆ," ಮಕ್ಕಳ ಸೇವೆಯಿಂದ ದೊರೆತ ತೃಪ್ತಿ ಮತ್ತು ಸಮಾಧಾನವೇ ನನಗೆ ದೊಡ್ಡ ಪ್ರಶಸ್ತಿ ಎಂದು ಸಚಿವ ಶ್ರೀ ಮಧು ಬಂಗಾರಪ್ಪ ಹೇಳಿದರು.

# ಸ್ಪೀಕರ್ ವಿರುದ್ಧ ಭ್ರಷ್ಟಾಚಾರ ಆರೋಪ: ರಾಜ್ಯಪಾಲರಿಗೆ ದೂರು

ಬೆಂಗಳೂರು – ವಿಧಾನಸಭೆಯ ಸಭಾಧ್ಯಕ್ಷ ಯು.ಟಿ.ಖಾದರ್ ಭಾರೀ ಭ್ರಷ್ಟಾಚಾರದಲ್ಲಿ ತೊಡಗಿದ್ದು, ಇತ್ತೀಚೆಗೆ ಖರೀದಿ ಮಾಡಿರುವ ಸಾಮಗ್ರಿಗಳ ಕುರಿತು ತನಿಖೆ ನಡೆಸುವಂತೆ ರಾಜ್ಯಪಾಲರಿಗೆ ದೂರು ನೀಡಲಾಗುವುದು ಎಂದು ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಆರೋಪಿಸಿದ್ದಾರೆ. ಅವರ ಘನತೆಗೆ, ಸ್ಥಾನ



ಮಾನಕ್ಕೆ ತಕ್ಕಂತೆ ನಡೆದುಕೊಳ್ಳುತ್ತಿಲ್ಲ. ಪ್ರತಿಯೊಂದು ನಡವಳಿಕೆಯೂ ಸಂಶಯಕ್ಕೆ ಎಡೆಮಾಡಿಕೊಡುತ್ತಿದ್ದು, ಇದರ ಬಗ್ಗೆ ತನಿಖೆಯ ಅಗತ್ಯವಿದೆ. ವಿಧಾನಸಭೆಯ ಇತಿಹಾಸ ದಲ್ಲೇ ಸ್ಪೀಕರ್ ಮೇಲೆ ಇಂಥ ಆರೋಪಗಳು ಮೊದಲ ಬಾರಿಗೆ ಬಂದಿವೆ ಅಸಮಾಧಾನ ವ್ಯಕ್ತಪಡಿಸಿದರು.

# ಡಿಕೆ ಶಿವಕುಮಾರ್ ಬಂಡಾಯವೇಳಲು ಸಾಧ್ಯವಿಲ್ಲ : ಜಾರಕಿಹೊಳಿ

ಬೆಂಗಳೂರು: "ನವೆಂಬರ್ ಕ್ರಾಂತಿ" ಮತ್ತು ವಿಶೇಷವಾಗಿ ಆಡಳಿತಾರೂಢ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆ ಕುರಿತಾದ ಊಹಾಪೋಹಗಳನ್ನು ಸ್ಪಷ್ಟವಾಗಿ ತಳ್ಳಿಹಾಕಿದ ಸಚಿವ ಸತೀಶ್ ಜಾರಕಿಹೊಳಿ ಅವರು, ಪಕ್ಷದ ಹೈಕಮಾಂಡ್ ಅಂತಹ ಯಾವುದೇ ಕ್ರಾಂತಿಗೆ ಅವಕಾಶ ನೀಡುವುದಿಲ್ಲ ಎಂದು ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಸತೀಶ್ ಜಾರಕಿಹೊಳಿ, ಏಕನಾಥ್ ಶಿಂಧೆ ಒಬ್ಬರೇ, ಅಜಿತ್ ಪವಾರ್ ಕೂಡ ಒಬ್ಬರೇ. ಮತ್ತೊಬ್ಬ ಏಕನಾಥ್ ಶಿಂಧೆ ಅಥವಾ ಪವಾರ್ ಹುಟ್ಟಿಕೊಳ್ಳಲು ಸಾಧ್ಯವಿಲ್ಲ ಎಂದರು. ಈ ಮೂಲಕ ಪರೋಕ್ಷವಾಗಿ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಬಂಡಾಯವೇಳಲು ಸಾಧ್ಯವಿಲ್ಲ ಎಂದಿದ್ದಾರೆ.




# ಗ್ರಾಮಗಳಲ್ಲಿ ಬಡಾವಣೆ ನಿರ್ಮಾಣಕ್ಕೆ ಅನುಮತಿ

ಬೆಂಗಳೂರು: ರಾಜ್ಯದ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸ್ಥಳೀಯ ಯೋಜನಾ ಪ್ರದೇಶವನ್ನು ಹೊರತುಪಡಿಸಿದ ಪ್ರದೇಶಗಳಲ್ಲಿನ ಭೂಪರಿವರ್ತಿತ ಜಮೀನುಗಳಲ್ಲಿ ಬಡಾವಣೆಗಳ ವಿನ್ಯಾಸ ಅನುಮೋದನೆಗೆ ರಾಜ್ಯ ಸರ್ಕಾರ ಅನುಮತಿಸಿ ಆದೇಶಿಸಿದೆ. ಈ ಮೂಲಕ ಗ್ರಾಮೀಣ ಭಾಗದಲ್ಲಿಯೂ ಬಡಾವಣೆಗಳನ್ನು ನಿರ್ಮಿಸುವುದಕ್ಕೆ ಅವಕಾಶ ನೀಡಿದೆ. ಗ್ರಾಮ



ಪಂಚಾಯತಿ ವ್ಯಾಪ್ತಿಯಲ್ಲಿ ಸ್ಥಳೀಯ ಯೋಜನಾ ಪ್ರದೇಶವನ್ನು ಹೊರತುಪಡಿಸಿದ ಪ್ರದೇಶಗಳಲ್ಲಿನ ಭೂಪರಿವರ್ತಿತ ಜಮೀನುಗಳಲ್ಲಿ ಬಡಾವಣೆಗಳ ವಿನ್ಯಾಸ ಅನುಮೋದನೆಯ ಕುರಿತು ವಹಿಸಬೇಕಾದ ಕ್ರಮಗಳ ಬಗ್ಗೆ ಗ್ರಾಮೀಣಾಭಿವೃದ್ಧಿ ಇಲಾಖೆ ಸುತ್ತೋಲೆಯ ಮೂಲಕ ಸ್ಪಷ್ಟ ನಿರ್ದೇಶನಗಳನ್ನು ನೀಡಿದೆ.

# ಎಂಟು ವರ್ಷಗಳಿಂದ ಸರಿಯಾಗಿ ಕಸ ಎತ್ತುವುದಕ್ಕೆ ಆಗುತ್ತಿಲ್ಲ : ಡಿಕೆಶಿ



ಬೆಂಗಳೂರು: 'ನಗರದಲ್ಲಿ ಎಂಟು ವರ್ಷಗಳಿಂದ ಸರಿಯಾಗಿ ಕಸ ಎತ್ತುವುದಕ್ಕೆ ಆಗುತ್ತಿಲ್ಲ. ಏನನ್ನಾದರೂ ಮಾಡಲು ಹೊರಟರೆ ಎಲ್ಲದಕ್ಕೂ ಕೋರ್ಟ್‌ನಿಂದ ತಡೆಯಾಜ್ಞೆ ತರುತ್ತಾರೆ. ಅನುಷ್ಠಾನಗೊಳಿಸಬೇಕಾದ ಯೋಜನೆಗಳ ಮೊತ್ತದಲ್ಲಿ ವರ್ಷವೊಂದಕ್ಕೆ 2 ಸಾವಿರ ಕೋಟಿ ನಷ್ಟವಾಗುತ್ತಿದೆ' ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಸಹಾಯಕತೆ ವ್ಯಕ್ತಪಡಿಸಿದರು. ಸಿಟಿ ಸಿವಿಲ್ ಸೆಷನ್ಸ್ ಕೋರ್ಟ್ ಆವರಣದಲ್ಲಿನ ಪ್ರಧಾನ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ 'ನ್ಯಾಯಮಿತ್ರ ಸಹಕಾರಿ ಬ್ಯಾಂಕ್' ಬೆಳ್ಳಿಹಬ್ಬದಲ್ಲಿ ಪಾಲ್ಗೊಂಡು ಮಾತನಾಡಿ, 'ವಕೀಲರು ಕೂಡಾ ಅಭಿವೃದ್ಧಿಯ ದೃಷ್ಟಿಯಿಂದ ಯೋಚನೆ ಮಾಡಬೇಕು ಎಂದರು.

# ಶೈಕ್ಷಣಿಕ ಚಟುವಟಿಕೆಗಳ ಸ್ಥಿತಿಗತಿಗಳ ಜಂಟಿ ಸುತ್ತೋಲೆ ಹಿಂಪಡೆಯಲು ಒತ್ತಾಯ

ರಾಮನಗರ: ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ (ಡಯಟ್) ಹಿರಿಯ ಉಪನ್ಯಾಸಕರುಗಳ ಮೂಲಕಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಶೈಕ್ಷಣಿಕ ಚಟುವಟಿಕೆಗಳ ಸ್ಥಿತಿಗತಿಗಳ ಮಾಹಿತಿ ಸಂಗ್ರಹಿಸುವ ಕುರಿತು ಹೊರಡಿಸಿರುವ ಜಂಟಿ ಸುತ್ತೋಲೆಯನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿ, ಕರ್ನಾಟಕ ರಾಜ್ಯ ಪದವಿ ಪೂರ್ವ ಕಾಲೇಜುಗಳ ಪ್ರಾಂ



ಶುಪಾಲರ ಸಂಘದ ಜಿಲ್ಲಾ ಘಟಕದ ಪದಾಧಿಕಾರಿಗಳು ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಉಪ ನಿರ್ದೇಶಕರ ಮೂಲಕ, ಇಲಾಖೆ ನಿರ್ದೇಸಕರಿಗೆ ಮನವಿ ಸಲ್ಲಿಸಿದರು. ಇಲ್ಲದಿದ್ದರೆ. ಪ್ರಾಂಶುಪಾಲರು ಮತ್ತು ಉಪನ್ಯಾಸಕರ ಸಂಘದಿಂದ ತೀವ್ರ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

# ಸುಪ್ರೀಂಕೋರ್ಟ್ ನ್ಯಾಯಮೂರ್ತಿಯಾಗಿ ಸೂರ್ಯಕಾಂತ್ ಶಿಫಾರಸು

ನವದೆಹಲಿ: ಸುಪ್ರೀಂಕೋರ್ಟ್‌ನ ಹಿರಿಯ ನ್ಯಾಯಾಧೀಶ ಸೂರ್ಯಕಾಂತ್ ಅವರನ್ನು ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡುವ ಮೂಲಕ ತಮ್ಮ ಉತ್ತರಾಧಿಕಾರಿಯನ್ನು ನೇಮಕ ಮಾಡುವ ಪ್ರಕ್ರಿಯೆಯನ್ನು ಭಾರತದ ಸಿಜೆಐ ಭೂಷಣ್ ಆರ್ ಗವಾಯಿ ಪ್ರಾರಂಭಿಸಿದ್ದಾರೆ. ಹಿರಿತನದ ಆಧಾರದ ಮೇಲೆ ಮುಂದಿನ ಸ್ಥಾನದಲ್ಲಿರುವ ನ್ಯಾಯಮೂರ್ತಿ ಸೂರ್ಯಕಾಂತ್ ಅವರು ನವೆಂಬರ್ 23ರಂದು ನ್ಯಾಯಮೂರ್ತಿ ಗವಾಯಿ ಅವರ ನಿವೃತ್ತಿಯ ನಂತರ ಅಧಿಕಾರ ವಹಿಸಿಕೊಳ್ಳಲು ಅರ್ಹರಾಗಿರುತ್ತಾರೆ. ಸಿಜೆಐ ಗವಾಯಿ ಅವರು ಶೀಘ್ರದಲ್ಲೇ ತಮ್ಮ ಶಿಫಾರಸು ಪತ್ರದ ಪ್ರತಿಯನ್ನು ನ್ಯಾಯಮೂರ್ತಿ ಕಾಂತ್ ಅವರಿಗೆ ಹಸ್ತಾಂತರಿಸಲಿದ್ದಾರೆ.




# 'ಉರ್ದು' ಹಿಂದೂ-ಮುಸ್ಲಿಮರ ಸಾಮರಸ್ಯ ಪ್ರಗತಿಯ ಸಂಕೇತ:ಕಿರಣ್ ರಿಜಿಜು

ನವದೆಹಲಿ: ಉರ್ದುವನ್ನು ವಿಶ್ವದ ಅತ್ಯಂತ ಸುಂದರ ಭಾಷೆ ಎಂದು ಬಣ್ಣಿಸಿರುವ ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ದೇಶದ ಪ್ರಗತಿಗೆ ಹಿಂದೂ-ಮುಸ್ಲಿಮರ ನಡುವಿನ ಸಾಮರಸ್ಯ ಅತ್ಯಗತ್ಯ ಎಂದಿದ್ದಾರೆ. ಜಾಮಿಯಾ ಮಿಲಿಯಾ ಇಸ್ಲಾಮಿಯಾದ (ಜೆಐಎಂ) ವಿಶ್ವವಿದ್ಯಾಲಯದ 105ನೇ



ಸಂಸ್ಥಾಪನಾ ದಿನಾಚರಣೆಯಲ್ಲಿ ಮಾತನಾಡಿದ ಅವರು, ಇಲ್ಲಿ ಭಾರತದ ವೈವಿಧ್ಯಮಯ ಸಂಸ್ಕೃತಿ ಮತ್ತು ಪ್ರಜಾಪ್ರಭುತ್ವ ಮನೋಭಾವವನ್ನು ಪ್ರತಿಬಿಂಬಿಸುತ್ತದೆ ಎಂದು ಶ್ಲಾಘಿಸಿದ್ದಾರೆ. ಸದಾ ಸ್ಮರಿಸುವ ಧೇಯ್ಯ ಗೀತೆಯು ದೇಶದ ಮೌಲ್ಯಗಳು ಮತ್ತು ಸಾಂಸ್ಕೃತಿಕ ಭಾವೈಕ್ಯತೆಯನ್ನು ಪ್ರತಿಬಿಂಬಿಸುತ್ತದೆ ಎಂದಿದ್ದಾರೆ.

# ಐಎಎಫ್ ಪೈಲಟ್ ಶಿವಾಂಗಿ ಜತೆ ರಾಷ್ಟ್ರಪತಿ ಮುರ್ಮು ಫೋಟೊ ರಿವಿಲ್



ನವದೆಹಲಿ: ಭಾರತ ಮತ್ತು ಪಾಕಿಸ್ತಾನದ ನಡುವೆ 2025ರ ಮೇ ತಿಂಗಳಿನಲ್ಲಿ ಯುದ್ಧ ಸಂಘರ್ಷ ಆರಂಭಗೊಂಡ ನಂತರ ಭಾರತೀಯ ಸೇನೆಯ ಸ್ಕ್ವಾರ್ಡನ್ ಲೀಡರ್ ಶಿವಾಂಗಿ ಸಿಂಗ್ ಅವರನ್ನು ಸೆರೆಹಿಡಿದಿರುವುದಾಗಿ ಪಾಕಿಸ್ತಾನದ ಹಲವು ಮಾಧ್ಯಮಗಳು ಸುಳ್ಳು ಸುದ್ದಿಯನ್ನು ಪ್ರಕಟಿಸಿದ್ದವು. ಆದರೆ ಇದೀಗ ಪಾಕಿಸ್ತಾನದ ಸುಳ್ಳು ಮತ್ತೊಮ್ಮೆ ಬಟಾಬಯಲಾಗಿದ್ದು, ಅಂಬಾಲಾ ಏರ್ ಫೋರ್ಸ್ ನೆಲೆಯಲ್ಲಿ ರಫೇಲ್ ಯುದ್ಧ ವಿಮಾನದ ಮೆಟ್ಟಿಲ ಮೇಲೆ ಐಎಎಫ್ ಅಧಿಕಾರಿ ಶಿವಾಂಗಿ ಸಿಂಗ್ ಸೇನಾ ಸಮವಸ್ತ್ರ ಧರಿಸಿದ್ದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಜತೆ ನಗುತ್ತಾ ನಿಂತಿರುವ ಫೋಟೋ ವೈರಲ್ ಆಗಿದೆ.

# ಮೆಹ್ಲಿ ಮಿಸ್ತ್ರಿ ಅವರನ್ನು ಟಾಟಾ ಟ್ರಸ್ಟ್ ಹೊರಹಾಕುವ ಸಾಧ್ಯತೆ !


ನವದೆಹಲಿ : ಟಾಟಾ ಟ್ರಸ್ಟ್‌ಗಳ ಮಂಡಳಿಯಿಂದ ರತನ್ ಟಾಟಾ ಅವರ ಆಪ್ತ ಮಿತ್ರ ಮೆಹ್ಲಿ ಮಿಸ್ತ್ರಿ ಅವರನ್ನು ಹೊರಹಾಕುವ ಸಾಧ್ಯತೆ ದಟ್ಟವಾಗಿದೆ. ಟಾಟಾ ಟ್ರಸ್ಟ್‌ಗಳ ಮಂಡಳಿಯಲ್ಲಿ ಮಿಸ್ತ್ರಿ ಅವರನ್ನು ಟ್ರಸ್ಟಿಯಾಗಿ ಮರು ನೇಮಕ ಮಾಡುವುದು ಅಸಾಧ್ಯವಾಗಿ ಕಂಡಿದ್ದು, ಕನಿಷ್ಠ ಮೂರು ಟ್ರಸ್ಟಿಗಳು ಈ ಕ್ರಮದ ವಿರುದ್ಧ ಮತ



ಚಲಾಯಿಸಿದ್ದಾರೆ ಎನ್ನಲಾಗಿದೆ. ಮೆಹ್ಲಿ ಮಿಸ್ತ್ರಿ ಅವರ ಮರು ನೇಮಕಕ್ಕೆ ನೋಯೆಲ್ ಟಾಟಾ, ವಿಜಯ್ ಸಿಂಗ್ ಮತ್ತು ವೇಣು ಶ್ರೀನಿವಾಸನ್ ವಿರೋಧ ವ್ಯಕ್ತಪಡಿಸಿದ್ದರೆ, ಜೆಹಾಂಗೀರ್ ಎಚ್.ಸಿ. ಜೆಹಾಂಗೀರ್ ಮತ್ತು ಡೇರಿಯಸ್ ಖಂಬಟ ಅವರು ಮಿಸ್ತ್ರಿ ಅವರ ಮುಂದುವರಿಕೆಯನ್ನು ಬೆಂಬಲಿಸಿದ್ದಾರೆಂದು ವರದಿಯಾಗಿದೆ.

# 12 ರಾಜ್ಯಗಳಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ : ಚುನಾವಣಾ ಆಯೋಗ

ನವದೆಹಲಿ : ಬಿಹಾರದ ನಂತರ ಚುನಾವಣಾ ಆಯೋಗವು ಭಾರತದ 12 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಘೋಷಿಸಿದೆ. SIR ಪ್ರಕ್ರಿಯೆಯ ಅಡಿಯಲ್ಲಿ ಬರುವ 12 ರಾಜ್ಯಗಳು ಮತ್ತು ಕೇಂದ್ರಡಾಳಿತ ಪ್ರದೇಶಗಳ ಮತದಾರರ ಪಟ್ಟಿಯನ್ನು ಸ್ಥಗಿತಗೊಳಿಸಲಾಗುವುದು ಎಂದು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಹೇಳಿದ್ದಾರೆ. ಬಿಹಾರದಲ್ಲಿ ಚುನಾವಣಾ ಆಯೋಗ ಇತ್ತೀಚೆಗೆ SIR ಅನ್ನು ಮುಕ್ತಾಯಗೊಳಿಸಿತ್ತು. ಈ ಪ್ರಕ್ರಿಯೆಯು 243 ವಿಧಾನಸಭಾ ಸ್ಥಾನಗಳನ್ನು ಹೊಂದಿರುವ ಬಿಹಾರ ರಾಜ್ಯದಲ್ಲಿ ಚುನಾವಣೆಗೆ ಪ್ರಮುಖ ಘರ್ಷಣೆಯನ್ನು ಉಂಟುಮಾಡಿತು.



ಕರಾವಳಿ ತರಂಗಿಣಿ

# ಕಲಾ ತರಂಗಿಣಿ

## ಗತವೈಭವ ಸಿನಿಮಾದ ಶಿಪ್ ಸಾಂಗ್ ಬಿಡುಗಡೆ ಮಾಡಿದ ಕರುನಾಡ ಕಿಂಗ್ ಶಿವಣ್ಣ

ಪ್ರತಿಯೊಂದು ಸಿನಿಮಾದಲ್ಲೂ ನಿರ್ದೇಶಕ ಸಿಂಪಲ್ ಸುನಿ ಅವರು ಡಿಫರೆಂಟ್? ಕಥಾ ವಸ್ತುವನ್ನು ಪ್ರೇಕ್ಷಕರ ಮುಂದಿಡುತ್ತಾರೆ. ಈಗ ಅವರು 'ಗತವೈಭವ' ಚಿತ್ರದ ಮೂಲಕ ಫ್ಯಾಂಟಸಿ ಮೈಥಾಲಜಿ ರೋಮ್ಯಾಂಟಿಕ್ ಲವ್ ಸ್ಟೋರಿ ಹೇಳೋದಿಕ್ಕೆ ಹೊರಟಿದ್ದಾರೆ. ನವ ಪ್ರತಿಭೆ ದುಶ್ಯಂತ್ ನಾಯಕನಾಗಿ ಆಶಿಕಾ ರಂಗನಾಥ್ ನಾಯಕಿ ಯಾಗ ಅಭಿನಯಿಸಿದ್ದಾರೆ. ಈಗಾಗಲೇ ತನ್ನ ಕಂಟೆಂಟ್ ಮೂಲಕ ನಿರೀಕ್ಷೆ ಹೆಚ್ಚಿಸಿರುವ ಈ ಸಿನಿಮಾ ನವೆಂಬರ್ 14ಕ್ಕೆ ತೆರೆಗೆ ಬರ್ತಿದೆ. ಸದ್ಯ ಗತ ವೈಭವ ಚಿತ್ರದ ಪ್ರಚಾರ ಕೆಲಸ ಭರದಿಂದ ಸಾಗಿದ್ದು, ಅದರ ಭಾಗವಾಗಿ ನಿನ್ನೆ ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಶಿಪ್ ಸಾಂಗ್‌ನ್ನು ಶಿವಣ್ಣ ಬಿಡುಗಡೆ ಮಾಡಿ ಚಿತ್ರತಂಡಕ್ಕೆ ಶುಭಾಶಯ ಕೋರಿದರು. ಹಾಡು ಬಿಡುಗಡೆ ಮಾಡಿ ಮಾತನಾಡಿದ ಶಿವಣ್ಣ, ಗತವೈಭವ ಶೂಟಿಂಗ್ ಸೆಟ್‌ಗೆ ಒಮ್ಮೆ ಹೋಗಿದ್ದೆ. ತುಂಬಾ ಇಷ್ಟವಾಗಿತ್ತು. ಸಿಂಪಲ್ ಸುನಿ ಅವರ ಯೋಚನೆ ಚಿಕ್ಕದಿದ್ದರೂ ಸಿನಿಮಾ ನೋಡುವಾಗ ಅದು ದೊಡ್ಡದಾಗಿ ಕಾಣಿಸುತ್ತದೆ. ಅವರ ಚಿತ್ರಗಳಲ್ಲಿ ಕಮರ್ಷಿಯಲ್, ಜೀವನದ ಮೌಲ್ಯ, ಮೇಕಿಂಗ್, ಇಂದಿನ ಟ್ರೆಂಡ್‌ಗೆ ತಕ್ಕಂತೆ ಅಚ್ಚುಕಟ್ಟಾಗಿ ಮಾಡುತ್ತಾರೆ. ಒಬ್ಬ ಅಣ್ಣನಾಗಿ ಅವರ ಸಿನಿಮಾ ಹಿಟ್ ಆಗಲಿ. ಮನೋಹಕ ಸಿನಿಮಾ ಆಗುತ್ತದೆ. ಅದು ಅಮೇಜಿಂಗ್ ಸಿನಿಮಾ ಆಗುತ್ತದೆ. ಗತವೈಭವ ಚಿತ್ರದ ನಿರ್ಮಾಪಕರಿಗೆ ಧನ್ಯವಾದ ಹೇಳಬೇಕು. ನಂಬಿಕೆ ಇಟ್ಕೊಂಡು ಹಣ ಹಾಕಿದ್ದಾರೆ. ದುಶ್ಯಂತ್ ಅವರದ್ದು ಮೊದಲ ಸಿನಿಮಾ ಅನಿಸುವುದಿಲ್ಲ. ಅವರು ಮಾಡಿರುವುದು ಸುಲಭದ ಪಾತ್ರವಲ್ಲ. ಮೊದಲ ಚಿತ್ರದಲ್ಲಿ ಒಳ್ಳೆ ಟ್ಯಾಲೆಂಟ್ ತೋರಿಸಿದ್ದಾರೆ. ಮ್ಯೂಸಿಕ್, ಛಾಯಾಗ್ರಹಣ ಅದ್ಭುತವಾಗಿ ಮೂಡಿಬಂದಿದೆ. ಆಶಿಕಾ ಮೊದಲು ಹೇಗೆ ಇದ್ದರೂ ಈಗಲೂ ಹಾಗೇ ಇದ್ದಾರೆ. ಕಿಶನ್ ಅದ್ಭುತ ಡ್ಯಾನ್ಸರ್. ಈ ಸಿನಿಮಾ ಚೆನ್ನಾಗಿ ಆಗುತ್ತದೆ. ಚಿತ್ರದಲ್ಲಿ ಪಾಸಿಟಿವ್ ವೈಬ್ ಇದೆ. ಇಡೀ ತಂಡಕ್ಕೆ ಒಳ್ಳೆಯದಾಗಲಿ ಎಂದರು. ಸಿಂಪಲ್ ಸುನಿ ಮಾತನಾಡಿ, ನಾನು ಡೈರೆಕ್ಟರ್ ಆಗಿದ್ದರೂ ಯಾವ ಶಿವಣ್ಣ ಫ್ಯಾನ್ ಆಗಿ ಇರಲು ಇಷ್ಟಪಡುತ್ತೇನೆ. ಮನಮೋಹಕ ಶಿವಣ್ಣನಿಗೆ ಸ್ಕ್ರಿಪ್ಟ್ ಕೊಟ್ಟಾಗ ಅಡ್ವಾನ್ಸ್ ಆಗದೇ ಫೋಟೋಶೂಟ್ ಮಾಡಲು ಒಪ್ಪಿದ್ದರು. ಈ ವಯಸ್ಸಿನಲ್ಲಿ ಬಹಳಷ್ಟು ಸಂಖ್ಯೆಯ ಸಿನಿಮಾಗಳನ್ನು ಹೊಂದಿರುವ ಹೀರೋ ಅಂದರೆ ಜಗತ್ತಿನಲ್ಲಿ ಅದು ಶಿವಣ್ಣ ಒಬ್ಬರೇ ಎನ್ನುವುದನ್ನು ಎದೆ ತಟ್ಟಿಕೊಟ್ಟಿಕೊಂಡು ಹೇಳಬಹುದು ಎಂದರು.



## ಅರ್ಜುನ್ ಯೋಗಿ ನಟನೆಯ 'ವರ್ಣ'

ಈಗಾಗಲೇ ನಾಲ್ಕು ಚಿತ್ರಗಳಲ್ಲಿ ನಾಯಕನಾಗಿ ನಟಿಸಿರುವ, ಧಾರಾವಾಹಿಗಳಲ್ಲೂ ಅಭಿನಯಿಸಿರುವ ಅರ್ಜುನ್ ಯೋಗಿ ನಾಯಕನಾಗಿ ನಟಿಸಿರುವ, ದೇವ ಶರ್ಮ ನಿರ್ದೇಶಿಸಿರುವ ಹಾಗೂ ಮಲ್ಲಿನೇನಿ ನವೀನ್ ಚೌಧರಿ ನಿರ್ಮಿಸಿರುವ "ವರ್ಣ" ಚಿತ್ರದ ಟೀಸರ್ ಇತ್ತೀಚೆಗೆ ಬಿಡುಗಡೆಯಾಯಿತು. ನಿರ್ಮಾಪಕರ ಪುತ್ರ ವರ್ಷನ್ ಚೌಧರಿ ಟ್ರೇಲರ್ ಅನಾವರಣ ಮಾಡಿದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ಶ್ರೀಕೃಷ್ಣ ಭಗವದ್ಗೀತೆಯಲ್ಲಿ ಹೇಳಿರುವ "ಕರ್ಮಣ್ಯೇವಾಧಿಕಾರಸ್ತೇ ಮಾಫಲೇಷು ಕದಾಚನ" ಎಂಬ ಮಾತೇ ಈ ಚಿತ್ರದ ಕಥೆಗೆ ಸ್ಪೂರ್ತಿ ಎಂದು ಮಾತನಾಡಿದ ನಿರ್ದೇಶಕ ದೇವ ಶರ್ಮ, ಮೊದಲು ಇದನ್ನು ಕಿರುಚಿತ್ರ ಮಾಡಲು ಹೊರಟಿದ್ದೆವು. ಆದರೆ ಕಥೆ ಕೇಳಿದ ನಿರ್ಮಾಪಕ ಮಲ್ಲೇನೇನಿ ನವೀನ್ ಚೌಧರಿ, ಕಥೆ ಚೆನ್ನಾಗಿದೆ. ಕಿರುಚಿತ್ರ ಬೇಡ. ಎಲ್ಲಾ ಸಿನಿಮಾಗಳಂತೆಯೇ ಯಾವುದೇ ಕೊರತೆ ಬಾರದ ಹಾಗೆ ನಿರ್ಮಾಣ ಮಾಡೋಣ ಎಂದು ನಮ್ಮ ಬೆನ್ನೆಲುಬಾಗಿ ನಿಂತರು. ಅವರಿಲ್ಲದೆ ಈ ಸಿನಿಮಾ ಸಾಧ್ಯವಾಗುತ್ತಿರಲಿಲ್ಲ. ನಾಯಕನಾಗಿ ಅರ್ಜುನ್ ಯೋಗಿ, ನಾಯಕಿಯಾಗಿ ಭವ್ಯ ಗೌಡ, ವಿಲನ್ ಪಾತ್ರದಲ್ಲಿ ಲಂಕೇಶ್ ರಾವಣ ನಟಿಸಿದ್ದಾರೆ. ಅನೇಕ ಅನುಭವಿ ಕಲಾವಿದರ ದೊಡ್ಡ ತಾರಾಬಳಗವೇ ಈ ಚಿತ್ರದಲ್ಲಿದೆ. ರಮೇಶ್ ಕೃಷ್ಣ ಸಂಗೀತ ನಿರ್ದೇಶನ, ಗೌರಿ ವೆಂಕಟೇಶ್ ಛಾಯಾಗ್ರಹಣ, ಸುಜಿತ್ ನಾಯಕ್ ಸಂಕಲನ, ಚಿನ್ನಯ್ಯ ಮಾಸ್ಟರ್ – ಸಾಗರ್ ಮಾಸ್ಟರ್ ಸಾಹಸ ನಿರ್ದೇಶನ ಹಾಗೂ ಹೈಟ್ ಮಂಜು,ಗೀತಾ ನೃತ್ಯ ನಿರ್ದೇಶನವಿರುವ ಈ ಚಿತ್ರದ ಚಿತ್ರೀಕರಣ ಬಹುತೇಕ ಮುಕ್ತಾಯವಾಗಿದ್ದು, ಪೋಸ್ಟ್ ಪ್ರೊಡಕ್ಷನ್ ವರ್ಕ್ ಬಿರುಸಿನಿಂದ ಸಾಗಿದೆ. ಈಗ ಟೀಸರ್ ಅನಾವರಣವಾಗಿದೆ. ಸದ್ಯದಲ್ಲೇ ಹಾಡುಗಳು ಹಾಗೂ ಟ್ರೇಲರ್ ಸಹ ಬರಲಿದೆ. ನಾನು ಪಾವಗಡ ದವನು. ಉದ್ಯಮಿ. ನಿರ್ದೇಶಕರು ಹೇಳಿದ ಕಥೆ ಇಷ್ಟವಾಯಿತು ಎಂದರು ನಿರ್ಮಾಪಕರು.



## ಭಾರತಿ ಟೀಚರ್ ಏಳನೇ ತರಗತಿ ಹಾಡುಗಳ ಲೋಕಾರ್ಪಣೆ

ಭಾರತಿ ಟೀಚರ್ ಏಳನೇ ತರಗತಿ ಚಿತ್ರದ ಡಾ.ವಿ.ನಾಗೇಂದ್ರ ಪ್ರಸಾದ್ ಒಡೆತನದ 'ಮ್ಯೂಸಿಕ್ ಬಜಾರ್' ಹೊರತಂದಿರುವ ಐದು ಗೀತೆಗಳ ಬಿಡುಗಡೆ ಕಾರ್ಯಕ್ರಮ ನ್ಯಾಷನಲ್ ಕಾಲೇಜು, ಡಾ.ಹೆಚ್.ನರಸಿಂಹಯ್ಯ ಸಭಾಂಗಣದಲ್ಲಿ ಅದ್ದೂರಿಯಾಗಿ ಶಾಲಾ ಮಕ್ಕಳ ಸಮ್ಮುಖದಲ್ಲಿ ನಡೆದಿದ್ದು ವಿಶೇಷ. ಶಿಕ್ಷಣ ಕ್ಷೇತ್ರದಲ್ಲಿ ಸಾಧನೆ ಮಾಡಿರುವ ದಾವಣಗೆರೆ ಮೂಲದ ಡಾ.ವಿ.ವಿಜಯಲಕ್ಷ್ಮೀ ಮತ್ತು ಉದ್ಯಮಿ ವೀರಕಪುತ್ರ ಶ್ರೀನಿವಾಸ್ ತಲಾ ಒಂದೊಂದು ಹಾಡುಗಳನ್ನು ಲೋಕಾರ್ಪಣೆಗೊಳಿಸಿ ತಂಡಕ್ಕೆ ಶುಭ ಹಾರೈಸಿದರು. ಸಿರಗುಪ್ಪ ಮೂಲದ ಉದ್ಯಮಿ ರಾಘವೇಂದ್ರ ರೆಡ್ಡಿ ಅವರು ಪೂಜ್ಯಾಯ ಫಿಲಂಸ್ ಅಡಿಯಲ್ಲಿ ನಿರ್ಮಾಣ ಮಾಡುತ್ತಿರುವುದು ಹೊಸ ಅನುಭವ. ಕಥೆ,ಚಿತ್ರಕಥೆ,ಸಂಭಾಷಣೆ,ಸಾಹಿತ್ಯ, ಸಂಗೀತ ಮತ್ತು ನಿರ್ದೇಶನವನ್ನು ಎಂ.ಎಲ್.ಪ್ರಸನ್ನ ನಿರ್ವಹಿಸಿದ್ದಾರೆ. ಕ್ರಿಷಿ ಸಂಸ್ಥೆಯ ವೆಂಕಟ್‌ಗೌಡ ಕ್ರಿಯೇಟೀವ್ ಹೆಡ್ ಆಗಿರುತ್ತಾರೆ. ಶಿಕ್ಷಕರಾಗಿ ಸಿಹಿಕಹಿ ಚಂದ್ರು, ಟೈಟಲ್ ರೋಲ್‌ದಲ್ಲಿ ಕು. ಯಶಿಕಾ, ಗೋವಿಂದೇಗೌಡ, ಅಶ್ವಿನ್ ಹಾಸನ್, ಕಾಮಿಡಿ ಕಿಲಾಡಿಗಳು ಖ್ಯಾತಿಯ ದಿವ್ಯಾ ಅಂಚನ್, ಬೆನಕಾ ನಂಜಪ್ಪ, ರೋಹಿತ್‌ರಾಘವೇಂದ್ರ, ಸೌಜನ್ಯಸುನಿಲ್, ಎಂ.ಜೆ.ರಂಗಸ್ವಾಮಿ ಮುಂತಾದವರು ನಟಿಸಿದ್ದಾರೆ. ಛಾಯಾಗ್ರಹಣ ಎಂ.ಬಿ.ಹಳ್ಳಿಕಟ್ಟಿ, ಸಂಕಲನ ಸುಜಿತ್‌ನಾಯಕ್, ವಾದ್ಯ ಸಂಯೋಜನೆ ಕೆ.ಎಂ.ಇಂದ್ರ, ನೃತ್ಯ ಕಂಬಿರಾಜ್, ಕಾರ್ಯಕಾರಿ ನಿರ್ಮಾಪಕ ರಾಘವ್‌ಸೂರ್ಯ–ದರ್ಶನ್ ಗೌಡ ಅವರದಾಗಿದೆ. ರಾಘವೇಂದ್ರ ರೆಡ್ಡಿ ಕನ್ನಡದ ಮೇಲಿನ ಅಭಿಮಾನದಿಂದ ಬಂಡವಾಳ ಹೂಡಿದ್ದಾರೆ.



## ಅಪ್ಪು ಫ್ಯಾನ್ ಡಮ್ ಆ್ಯಪ್ ಲಾಂಚ್.. ಡಿ.ಕೆ. ಶಿವಕುಮಾರ್ ಸಾಥ್

ಖ್ಯಾತನಟ ದಿ.ಡಾ.ಪುನೀತ್ ರಾಜ್‌ಕುಮಾರ್ ಅವರು ನಮ್ಮನೆಲ್ಲ ಅಗಲಿ ಇದೇ ಅಕ್ಟೋಬರ್ 29ಕ್ಕೆ ನಾಲ್ಕು ವರ್ಷ ಕಳೆಯುತ್ತಿದೆ. ಈ ಸಂದರ್ಭದಲ್ಲಿ ಪುನೀತ್ ಅವರನ್ನು ಎಐ (ಕೃತಕ ಬುದ್ಧಿಮತ್ತೆ) ಮೂಲಕ ಅಭಿಮಾನಿಗಳಿಗೆ ತೋರಿಸುವ ಸ್ಟಾರ್ ಫ್ಯಾನ್ ಡಮ್ ಆ್ಯಪ್ (ಕನ್ನಡದ ಅಪ್ಪು ಪಿಆರ್‌ಕೆ ಮೊಬೈಲ್ ಆ್ಯಪ್) ಅನ್ನು ಶನಿವಾರ ಖಾಸಗಿ ಹೋಟೆಲ್? ನಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್ ಅನಾವರಣಗೊಳಿಸಿದ್ದಾರೆ. ಈ ಸಂದರ್ಭದಲ್ಲಿ ನಿರ್ಮಾಪಕಿ ಅಶ್ವಿನಿ ಪುನೀತ್ ರಾಜ್‌ಕುಮಾರ್ ಹಾಗೂ ಸ್ಟಾರ್ ಫ್ಯಾನ್ ಡಮ್ ಆ್ಯಪ್ ಸಂಸ್ಥೆಯ ಅಧ್ಯಕ್ಷ ಡಾ.ಸಮರ್ಥ ರಾಘವ ನಾಗಭೂಷಣಂ ಸೇರಿದಂತೆ ಇಡೀ ತಂಡ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಬಳಿಕ ಮಾತನಾಡಿದ ಡಿಕೆ ಶಿವಕುಮಾರ್, "ಪುನೀತ್ ರಾಜಕುಮಾರ್ ಅವರನ್ನು ರಾಜಕಾರಣಕ್ಕೆ ಸೆಳೆಯಲು ನಾನು ಅನೇಕ ಬಾರಿ ಪ್ರಯುತ್ನಪಟ್ಟೆ, ಚಾಕಲೇಟ್ ಕೊಟ್ಟೆ. ಆದರೆ ಅವರು ಬರಲಿಲ್ಲ. ಸಹೋದರಿ ಅಶ್ವಿನಿ ಅವರನ್ನೂ ಸಹ ಆಹ್ವಾನಿಸಿದೆ. ಅವರೂ ಸಹ ತಮ್ಮ ಪತಿ ಹಾದಿಯಲ್ಲೇ ನಡೆಯುವುದಾಗಿ ತಿಳಿಸಿದರು. ರಾಜಕಾರಣಕ್ಕೆ ಬರಲಿಲ್ಲ" ಎಂದು ಹೇಳಿದರು. ಅಶ್ವಿನಿ ರಾಜಕೀಯಕ್ಕೆ ಬರಲು ತಿರಸ್ಕರಿಸಿದಾಗ, ಸಕ್ರಿಯ ರಾಜಕಾರಣಕ್ಕೆ ಬರುವುದು ಬೇಡ, ಆದರೆ ಮುಖ್ಯ ವಾಹಿನಿಯಲ್ಲಿರಿ ಎಂದಿದ್ದೆ. ಇಷ್ಟು ದಿನ ಇದನ್ನು ಬಹಿರಂಗಗೊಳಿಸಿರಲಿಲ್ಲ. ಇಂದು ಬಹಿರಂಗಗೊಳಿಸಿದ್ದೇನೆ" ಎಂದರು. "ರಾಮಾಯಣ ಮತ್ತು ಮಹಾ ಭಾರತಗಳು ಅನೇಕ ವರ್ಷಗಳಿಂದ ನಮ್ಮ ನಡುವೆ ಉಳಿದುಕೊಂಡಿವೆ. ಪುನೀತ್ ರಾಜಕುಮಾರ್ ಮಾಡಿರುವ ಕೆಲಸಗಳು ಹೊಸ ತಂತ್ರಜ್ಞಾನದ ಮೂಲಕ ನಮ್ಮ ನಡುವೆ ಜೀವಂತವಾಗಿರುತ್ತವೆ" ಎಂದು ತಿಳಿಸಿದರು. "ಎಐ ತಂತ್ರಜ್ಞಾನದ ಮೂಲಕ ಭೀಮ, ಅರ್ಜುನ, ರಾಮ ಹೀಗೆ ಅನೇಕ ಪಾತ್ರಗಳನ್ನು ನೈಜತೆಗೆ ಹತ್ತಿರ ವಾದಂತೆ ಚಿತ್ರಿಸಲಾಗುತ್ತಿದೆ. ಈ ಆ್ಯಪ್‌ನಲ್ಲಿ ಬಾಲ್ಯ ಕಾಲದ ಪುನೀತ್ ಸೇರಿದಂತೆ ಇತ್ತೀಚಿನ ದಿನಗಳ ಪುನೀತ್‌ವರೆಗೆ ಸೃಷ್ಟಿಸಲಾಗಿದೆ.



## ನಾಯಕನ ಹೆಸರೆ ಚಿತ್ರದ ಶೀರ್ಷಿಕೆಯಾಗಿರುವುದು ವಿಶೇಷ

ಅಶ್ವಿನಿ ಪುನೀತ್ ರಾಜಕುಮಾರ್ ಅವರ ಆಶೀರ್ವಾದದೊಂದಿಗೆ, ಎಸ್‌ಎನ್‌ಆರ್ ಪ್ರೊಡಕ್ಷನ್ಸ್ ಲಾಂಛನದಲ್ಲಿ ಸಾಲಿಗ್ರಾಮ ಸುರೇಶ್ ಅವರು ನಿರ್ಮಿಸುತ್ತಿರುವ ವೆಂಕಟ್ ಭಾರದ್ವಾಜ್ ನಿರ್ದೇಶನದಲ್ಲಿ ರಕ್ಕಿ ನಾಯಕನಾಗಿ ನಟಿಸುತ್ತಿರುವ "ರಕ್ಕಿ" ಚಿತ್ರದ ಮುಹೂರ್ತ ಸಮಾರಂಭ ಇತ್ತೀಚೆಗೆ ರೇಣುಕಾಂಬ ಥಿಯೇಟರ್ ನಲ್ಲಿ ನೆರವೇರಿತು. ಅಶ್ವಿನಿ ಪುನೀತ್ ರಾಜಕುಮಾರ್ ಚಿತ್ರದ ಮೊದಲ ಸನ್ನಿವೇಶಕ್ಕೆ ಆರಂಭ ಫಲಕ ತೋರಿಸುವ ಮೂಲಕ ಚಾಲನೆ ನೀಡಿ ಯಶಸ್ವಿಯಾಗಲೆಂದು ಹಾರೈಸಿದರು. ನಂತರ ಪತ್ರಿಕಾ ಗೋಷ್ಠಿಯಲ್ಲಿ ಚಿತ್ರತಂಡದ ಸದಸ್ಯರು ಮಾತ ನಾಡಿದರು. ಜರ್ಮನ್ ನಲ್ಲಿ ಹಲವು ವರ್ಷಗಳಿಂದ ನೆಲೆಸಿರುವ ಸಾಲಿಗ್ರಾಮ ಮೂಲದ ಸುರೇಶ್ ಈ ಚಿತ್ರವನ್ನು ನಿರ್ಮಾಣ ಮಾಡುತ್ತಿದ್ದಾರೆ. ಸುರೇಶ್ ಅವರ ಪುತ್ರ ರಕ್ಕಿ ಈ ಚಿತ್ರದ ನಾಯಕನಾಗಿ ನಟಿಸುತ್ತಿದ್ದಾರೆ. ನಿರ್ಮಾಪಕರಿಗೆ ನಾನು ಮೊದಲು ಎರಡು ಕಥೆ ಹೇಳಿದ್ದೆ. ಅವರು ಈ ಕಥೆಯನ್ನು ಅಶ್ವಿನಿ ಪುನೀತ್ ರಾಜಕುಮಾರ್ ಬಳಿ ಹೇಳಿ. ಅವರು ಒಪ್ಪುವ ಕಥೆಯನ್ನು ಸಿನಿಮಾ ಮಾಡೋಣ ಎಂದರು.



## ನವೆಂಬರ್ 21ಕ್ಕೆ 'Congratulations ಬ್ರದರ್'

ಸಾಮಾಜಿಕ ಮಾಧ್ಯಮದಲ್ಲಿ ಸಾಕಷ್ಟು ಸದ್ದು ಮಾಡಿರುವ ಡೈಲಾಗ್ "Congratulations ಬ್ರದರ್". ಈಗ ಈ ಜನಪ್ರಿಯ ಡೈಲಾಗ್ ಸಿನಿಮಾ ಶೀರ್ಷಿಕೆಯಾಗಿರುವುದು ಎಲ್ಲರಿಗೂ ತಿಳಿದ ಸಂಗತಿ. ಕಲ್ಲೂರ್ ಸಿನಿಮಾಸ್, ಪೆನ್ ಎನ್ ಪೇಪರ್ ಸ್ಟುಡಿಯೋಸ್ ಹಾಗೂ ಸ್ಕ್ರೀನ್ ಫಸ್ಟ್ ಪ್ರೊಡಕ್ಷನ್ ಲಾಂಛನದಲ್ಲಿ ಪ್ರಶಾಂತ್ ಕಲ್ಲೂರ್ ಅವರು ನಿರ್ಮಿಸಿರುವ, ಪ್ರತಾಪ್ ಗಂಧರ್ವ ನಿರ್ದೇಶನದ, ಹೆಸರಾಂತ ನಿರ್ದೇಶಕ ಹರಿ ಸಂತೋಷ್ ಕಥೆ ಬರೆದು ಕ್ರಿಯೇಟಿವ್ ಹೆಡ್ ಆಗಿ ಕಾರ್ಯ ನಿರ್ವಹಿಸಿರುವ ಹಾಗೂ ಯುವ ನಟ ರಕ್ಷಿತ್ ನಾಗ್ ನಾಯಕನಾಗಿ ಹಾಗೂ ಸಂಜನ್ ದಾಸ್ ನಾಯಕಿಯರಾಗಿ ನಟಿಸಿರುವ "Congratulations ಬ್ರದರ್" ಚಿತ್ರ ಆರಂಭದಿಂದಲೂ ಸಾಕಷ್ಟು ಸದ್ದು ಮಾಡುತ್ತಿದೆ. ಹರೀಶ್ ರೆಡ್ಡಿ ಅವರ ಸಹ ನಿರ್ಮಾಣವಿರುವ ಈ ಚಿತ್ರ ನವೆಂಬರ್ 21ರಂದು ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ. ಅದಕ್ಕೂ ಮುನ್ನ ಚಿತ್ರತಂಡ ವಿನೂತನ ಪ್ರಚಾರಕ್ಕೆ ಮುಂದಾಗಿದೆ. ಬೀದರ್‌ನಿಂದ ಚಾಮರಾಜನಗರದವರೆಗೂ ಚಿತ್ರತಂಡ ಕರ್ನಾಟಕದ ಪ್ರತಿಯೊಂದು ಜಿಲ್ಲೆಗಳಿಗೂ ಭೇಟಿ ನೀಡಿ ಜನರಿಗೆ ಚಿತ್ರದ ಬಗ್ಗೆ ಮಾಹಿತಿ ನೀಡಲಿದೆ. ಅದಕ್ಕಾಗಿ ನೂತನ ಪ್ರಚಾರದ ವಾಹನವೊಂದು ಸಿದ್ಧವಾಗಿದೆ.



## 'ಕಲ್ಟ್' 2026ರ ಜನವರಿ 23ರಂದು ತೆರೆಗೆ

"ಬನಾರಸ್" ಚಿತ್ರದ ಮೂಲಕ ಎಲ್ಲರ ಗಮನ ಸೆಳೆದಿದ್ದ ನಟ ಝೈದ್ ಖಾನ್ ನಾಯಕರಾಗಿ ನಟಿಸಿರುವ, "ಉಪಾಧ್ಯಕ್ಷ" ಸೇರಿದಂತೆ ಯಶಸ್ವಿ ಚಿತ್ರಗಳ ನಿರ್ದೇಶಕ ಅನಿಲ್ ಕುಮಾರ್ ನಿರ್ದೇಶನದ ಹಾಗೂ ರಚಿತರಾಮ್ ಮತ್ತು ಮಲೈಕಾ ನಾಯಕಿಯರಾಗಿ ಅಭಿನಯಿಸಿರುವ ಬಹು ನಿರೀಕ್ಷಿತ "ಕಲ್ಟ್" ಚಿತ್ರದ ಎರಡನೇ ಹಾಡು "ಬ್ಲಡಿ ಲವ್" ಕಿತ್ತೂರು ಉತ್ಸವದಲ್ಲಿ ಬಿಡುಗಡೆಯಾಗಿದೆ. ನಿರ್ದೇಶಕ ಅನಿಲ್ ಕುಮಾರ್ ಅವರೆ ಬರೆದಿರುವ ಈ ಹಾಡನ್ನು ಚಂದನ್ ಶೆಟ್ಟಿ ಹಾಡಿದ್ದಾರೆ. ಅರ್ಜುನ್‌ಜನ್ಯ ಸಂಗೀತ ನೀಡಿದ್ದಾರೆ. ಆನಂದ್ ಆಡಿಯೋ ಯೂಟ್ಯೂಬ್ ಚಾನಲ್ ಮೂಲಕ ಬಿಡುಗಡೆಯಾಗಿರುವ ಈ ಹಾಡಿಗೆ ಮೆಚ್ಚುಗೆಯ ಮಹಾಪೂರವೇ ಹರಿದು ಬರುತ್ತಿದೆ. ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುತ್ತಿದೆ. ಆರಂಭದಿಂದಲೂ ಸಾಕಷ್ಟು ಸದ್ದು ಮಾಡುತ್ತಿರುವ ಈ ಚಿತ್ರ 2026ರ ಜನವರಿ 23ರಂದು ಬಿಡುಗಡೆಯಾಗುತ್ತಿದೆ. ಹಾಡು ಬಿಡುಗಡೆ ಸಮಾರಂಭದ ನಂತರ ನಾಯಕ ಝೈದ್ ಖಾನ್ ಹಾಗೂ ನಾಯಕಿ ಮಲೈಕಾ ಮಾತನಾಡಿದರು. ಕಿತ್ತೂರು ಉತ್ಸವಕ್ಕೆ ಇದೇ ಮೊದಲ ಬಾರಿ ಬಂದಿರುವುದು ಎಂದರು.



## ಶ್ರೀಮುರಳಿ ಪರಾಕ್ ಅಖಾಡಕ್ಕೆ ಸ್ಟಂಟ್ ಮಾಸ್ಟರ್ ರವಿ ವರ್ಮ ಎಂಟ್ರಿ

ಬಘೀರ ಬಳಿಕ ಶ್ರೀಮುರಳಿ ಕೈಗೆತ್ತಿಕೊಂಡಿರುವ ಸಿನಿಮಾ ಪರಾಕ್. ಯುವ ಪ್ರತಿಭೆ ಹಾಲೇಶ್ ಕೋಗುಂಡಿ ನಿರ್ದೇಶಿಸುತ್ತಿರುವ ಚೊಚ್ಚಲ ಚಿತ್ರದ ಶೂಟಿಂಗ್ ಭರದಿಂದ ಸಾಗುತ್ತಿದೆ. ಇದೀಗ ಪರಾಕ್ ಅಂಗಳಕ್ಕೆ ಖ್ಯಾತ ಸ್ಟಂಟ್ ಮಾಸ್ಟರ್ ರವಿವರ್ಮ ಎಂಟ್ರಿ ಕೊಟ್ಟಿದ್ದಾರೆ. ರವಿವರ್ಮ, ಸ್ಯಾಂಡಲ್ ವುಡ್ ಮಾತ್ರವಲ್ಲ ಬಾಲಿವುಡ್ ಸ್ಟಾರ್ ಹೀರೋ, ಸ್ಟಾರ್ ಡೈರೆಕ್ಟರ್ ಗಳಿಂದ ಸೈ ಎನಿಸಿಕೊಂಡವರು. ಸಲ್ಮಾನ್ ಖಾನ್, ಶಾರುಖ್ ಖಾನ್ ಸಿನಿಮಾಗಳಿಗೆ ಸಾಹಸ ಸಂಯೋಜಿಸಿ ಜನಪ್ರಿಯತೆಗಳಿಸಿರುವ ರವಿವರ್ಮ ಈಗ ಶ್ರೀಮುರಳಿಗೆ ಆಕ್ಷನ್ ಹೇಳಿಕೊಡಲು ರೆಡಿಯಾಗಿದ್ದಾರೆ. ಕನ್ನಡದ ರವಿವರ್ಮ, ಎಲ್ಲಾ ಭಾಷೆಯಲ್ಲೂ ಕೆಲಸ ಮಾಡಿ ಸೈ ಎನಿಸಿಕೊಂಡಿದ್ದಾರೆ. ಬಹುತೇಕ ಸೂಪರ್ ಸ್ಟಾರ್ಗಳ ಸಿನಿಮಾಗಳಿಗೆ ರವಿವರ್ಮಾ ಸ್ಟಂಟ್ ಇರುತ್ತೆ. ಇದೀಗ ರೋರಿಂಗ್ ಸ್ಟಾರ್ ಶ್ರೀಮುರಳಿ ಅವರ ಪರಾಕ್ ಚಿತ್ರಕ್ಕೆ ರವಿವರ್ಮ ಸ್ಟಂಟ್ ಕಂಪೋಸ್ ಮಾಡಲಿದ್ದಾರೆ. ಬ್ರ್ಯಾಂಡ್ ಸ್ಟುಡಿಯೋಸ್ ಬ್ಯಾನರ್ ಅಡಿ ಪರಾಕ್ ಸಿನಿಮಾ ನಿರ್ಮಾಣವಾಗುತ್ತಿದೆ.



## ಚಾಮುಂಡೇಶ್ವರಿಯ ಸನ್ನಿಧಿಯಲ್ಲಿ 'ಜುಮ್ಕಿ' ಕಲರವ

ಮೈಸೂರಿನ ಚಾಮುಂಡಿ ಬೆಟ್ಟದ ಚಾಮುಂಡೇಶ್ವರಿ ತಾಯಿಯ ಸನ್ನಿಧಿಯಲ್ಲಿ ನೆರವೇರಿತು "ಜುಮ್ಕಿ" ಚಿತ್ರದ ಸ್ಕ್ರಿಪ್ಟ್ ಪೂಜೆ. ಈಗಾಗಲೇ ಧೈವ ಚಿತ್ರದಲ್ಲಿ ನಟಿಸಿ, ಆಕ್ಷನ್ ಕಟ್ ಹೇಳಿರುವ ಒ.ಎ. ಜಯರಾಜ್ ಈಗ ಜುಮ್ಕಿಯ ಸದ್ದಿಗೆ ಫಿಧಾ ಆಗಿದ್ದಾರೆ. ಜುಮ್ಕಿ ಚಿತ್ರಕ್ಕೆ ನಿರ್ದೇಶನ ಮಾಡುವುದರ ಜೊತೆಗೆ ನಾಯಕನಟನಾಗಿ ಅಭಿನಯಿಸುತ್ತಿದ್ದಾರೆ. ಕಲ್ಪವೃಕ್ಷ ಕ್ರಿಯೇಷನ್ ಬ್ಯಾನರ್‌ನಲ್ಲಿ ಸಂಗಮ್ಮ ರಾಮಣ್ಣ ಮೇಘಲಮನಿ ಯವರ ನಿರ್ಮಾಣದಲ್ಲಿ "ಜುಮ್ಕಿ" ಒಂದು ಸುಂದರ ಪ್ರೇಮ ಕಥೆಯಾಗಿದ್ದು, ಈ ಚಿತ್ರಕ್ಕೆ VCN ಮಂಜುರಾಜ್ ಸೂರ್ಯ ಕಥೆ, ಚಿತ್ರಕಥೆಯಲ್ಲಿ ತೊಡಗಿಸಿಕೊಂಡಿದ್ದಾರೆ ಹಾಗೂ ಸಿದ್ಧಾರ್ಥ್ ರವರು ಛಾಯಾಗ್ರಹಣ ಹಾಗೂ ವಿಜೇತ್ ಮಂಜಯ್ಯನವರು ಸಂಗೀತ ಮಾಡುತ್ತಿದ್ದಾರೆ. ಇಂದು ಚಾಮುಂಡಿ ಬೆಟ್ಟದಲ್ಲಿ ಪೂಜೆಯಲ್ಲಿ ನಿರ್ದೇಶಕ, ನಾಯಕನಟ ಒ.ಎ. ಜಯರಾಜ್, VCN ಮಂಜುರಾಜ್, ಛಾಯಾಗ್ರಾಹಕ ಸಿದ್ಧಾರ್ಥ್ ಮೊದಲಾದವರು ತಾಯಿಯ ಆಶೀರ್ವಾದಪಡೆದರು.



## ಮೆಜೆಸ್ಟಿಕ್–2 ನವೆಂಬರ್‌ನಲ್ಲಿ ಬಿಡುಗಡೆ

ಅಮ್ಮಾ ಎಂಟರ್ ಪ್ರೈಸಸ್ ಮೂಲಕ ಕೋಟೆ ನಾಡು ಚಿತ್ರದುರ್ಗದ ಹೆಚ್. ಆನಂದಪ್ಪ ಅದ್ದೂರಿಯಾಗಿ ನಿರ್ಮಿಸಿರುವ ಚಿತ್ರ ಮೆಜೆಸ್ಟಿಕ್–2. ಹಿರಿಯ ನಿರ್ಮಾಪಕ ಶಿಲ್ಪಾ ಶ್ರೀನಿವಾಸ್ ಅವರ ಪುತ್ರ ಭರತ್ ಕುಮಾರ್ ಈ ಚಿತ್ರದಲ್ಲಿ ನಾಯಕನಾಗಿ ಕಾಣಿಸಿಕೊಂಡಿದ್ದಾರೆ. ಹಿರಿಯನಟಿ ಶೃತಿ ನಾಯಕನ ತಾಯಿ ಪಾತ್ರವನ್ನು ನಿಭಾಯಿಸಿದ್ದಾರೆ. ಈಗಾಗಲೇ ಶೂಟಿಂಗ್ ಪೋಸ್ಟ್ ಪ್ರೊಡಕ್ಷನ್ ಕೆಲಸಗಳನ್ನು ಮುಗಿಸಿಕೊಂಡು ಬಿಡುಗಡೆಗೆ ಸಿದ್ಧವಾಗಿರುವ ಈ ಚಿತ್ರವನ್ನು ಬರುವ ನವೆಂಬರ್‌ನಲ್ಲಿ ರಿಲೀಸ್ ಮಾಡಲು ನಿರ್ಮಾಪಕರು ಸಿದ್ಧತೆ ಮಾಡಿ ಕೊಂಡಿದ್ದಾರೆ. ಇತ್ತೀಚೆಗಷ್ಟೇ ಈ ಚಿತ್ರವನ್ನು ವೀಕ್ಷಿಸಿದ ಸೆನ್ಸಾರ್ ಮಂಡಳಿ ಚಿತ್ರಕ್ಕೆ U/A ಸರ್ಟಿಫಿಕೇಟ್ ನೀಡಿದೆ. ಈ ಚಿತ್ರಕ್ಕೆ ರಾಮು ಕಥೆ, ಚಿತ್ರ ಕಥೆ ಬರೆದು ಆಕ್ಷನ್ ಕಟ್ ಹೇಳಿದ್ದಾರೆ. ಯುವನಟ ಭರತ್ ಕುಮಾರ್, ಸಂಹಿತಾ ವಿನ್ಯಾ ನಾಯಕ, ನಾಯಕಿಯಾಗಿ ಕಾಣಿಸಿಕೊಂಡಿದ್ದಾರೆ. ಈಗಿನ ಮೆಜೆಸ್ಟಿಕ್ ಏರಿಯಾ ಹೇಗಿದೆ. ಅಲ್ಲಿ ನಡೆಯುವ ದಂಧೆಗಳು, ಅಕ್ರಮ ಚಟುವಟಿಕೆಗಳು ಅಲ್ಲದೆ ಈಗಲೂ ಅಲ್ಲಿ ರೌಡಿಸಂ ಹೇಗೆ ನಡೆಯುತ್ತೆ ಎಂಬುದನ್ನು ಅಲ್ಲಿಯೇ ಹುಟ್ಟಿ ಬೆಳೆದ ಹುಡುಗನೊಬ್ಬನ ಕಥೆಯ ಮೂಲಕ ಮೆಜೆಸ್ಟಿಕ್–2 ಚಿತ್ರದಲ್ಲಿ ನಿರ್ದೇಶಕ ರಾಮು ಹೇಳಹೊರಟಿದ್ದಾರೆ.





ಕರಾವಳಿ ತರಂಗಿಣಿ

# ಸಿನಿ ತರಂಗಿಣಿ

## ಬರುತಿದೆ ಎಸ್‌ವಿಆರ್ ನಿರ್ದೇಶನದ "ರಕ್ತ ಕಾಶ್ಮೀರ"



ಎಮ್‌ಡಿಎಮ್ ಪ್ರೊಡಕ್ಷನ್ ಲಾಂಛನದಲ್ಲಿ ನಿರ್ಮಾಣವಾಗಿರುವ, ಹಿರಿಯ ನಿರ್ದೇಶಕ ಎಸ್ ವಿ ರಾಜೇಂದ್ರ ಸಿಂಗ್ ಬಾಬು ನಿರ್ದೇಶನದ ಹಾಗೂ ರಿಯಲ್ ಸ್ಟಾರ್ ಉಪೇಂದ್ರ, ರಮ್ಯ ನಟಿಸಿರುವ "ರಕ್ತ ಕಾಶ್ಮೀರ"ತೆರೆಗೆ ಬರಲು ಸಿದ್ದವಾಗಿದೆ. ಎಸ್‌ವಿಆರ್ ಚಿತ್ರದ ಬಗ್ಗೆ ತಿಳಿಸಿದರು. ನಂತರ ಮಾತಾಡಿದ ಆದಿತ್ಯ ನಾನು ಈ ಚಿತ್ರದ ನಿರ್ಮಾಪಕನಾಗಿದ್ದೇನೆ. ನಮ್ಮ ಚಿತ್ರ ಸದ್ಯದಲ್ಲೇ ತೆರೆಗೆ ಬರಲಿದೆ. ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದು ಆದಿತ್ಯ ಹೇಳಿದರು. ನಾನು ಈ ಹಿಂದೆ ಬಾಬು ಅವರ ಕೆಲವು ಚಿತ್ರಗಳನ್ನು ಹಂಚಿಕೆ ಮಾಡಿದ್ದೆ. ಆದರೆ ವಿಶಾಲ ಕರ್ನಾಟಕಕ್ಕೆ ಹಂಚಿಕೆ ಮಾಡುತ್ತಿರುವುದು ಇದೇ ಮೊದಲು ಎಂದು ಮಾರ್ಸ್ ಸುರೇಶ್ ತಿಳಿಸಿದರು. "ವೀರ ಕಂಬಳ" ಚಿತ್ರದ ನಿರ್ಮಾಪಕ ಅರುಣ್ ರೈ ಹಾಗೂ ಕನ್ನಡ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಕೃಷ್ಣೇಗೌಡ ಚಿತ್ರ ಯಶಸ್ವಿಯಾಗಲೆಂದು ಹಾರೈಸಿದರು.

## ನವೆಂಬರ್ 7ಕ್ಕೆ ಲವ್ ಯು ಮುದ್ದು ತೆರೆಗೆ..



ಪ್ರೀತಿಯನ್ನು ಪಡೆದುಕೊಳ್ಳುವ ಶಕ್ತಿ ಇಲ್ಲದೇ ಇದ್ರೆ ಪ್ರೀತಿ ಮಾಡಬಾರದು ಎಂಬ ಎಳೆಯನ್ನು ಇಟ್ಕೊಂಡು ಬರುತ್ತಿರುವ ಸಿನಿಮಾ ಲವ್ ಯು ಮುದ್ದು. ಕೆಮಿಸ್ಟ್ರಿ ಆಫ್ ಕರಿಯಪ್ಪ ನಿರ್ದೇಶಕ ಕುಮಾರ್ ಅವರ ಹೊಸ ಪ್ರಯತ್ನದ ಈ ಚಿತ್ರವೀಗ ಬಿಡುಗಡೆಗೆ ಸಜ್ಜಾಗಿದೆ. ನವೆಂಬರ್ 7ರಂದು ಲವ್ ಯು ಮುದ್ದು ಸಿನಿಮಾ ತೆರೆಗೆ ಬರುತ್ತಿದೆ. ಪ್ರಚಾರ ಕಾರ್ಯ ಭರದಿಂದ ಸಾಗಿದ್ದು, ಅದರ ಭಾಗವಾಗಿ ಬೆಂಗಳೂರಿನ ಜಿಟಿ ಮಾಲ್‌ನಲ್ಲಿ ಟ್ರೇಲರ್ ಬಿಡುಗಡೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ನಿರ್ಮಾಪಕರು ಹಾಗೂ ಖ್ಯಾತ ಛಾಯಾಗ್ರಾಹಕ ಜೆ ಜಿ ಕೃಷ್ಣ ನಟಿ ಮತ್ತು ಸಂಜನಾ ಆನಂದ್ ವಿಶೇಷ ಅತಿಥಿಯಾಗಿ ಆಗಮಿಸಿ ಇಡೀ ತಂಡಕ್ಕೆ ಶುಭಾಶಯ ತಿಳಿಸಿ ನಿರ್ಮಾಪಕರು ಉಳಿದರೆ ನೂರು ಫ್ಯಾಮಿಲಿಗೆ ಊಟ ಹಾಕುತ್ತಾರೆ ಎಂದರು.

## ಗದಾಕೇಸರಿ ನಿರ್ದೇಶಿಸಿದ ಸಂಕಲನಕಾರ ಕುಮಾರ

ಸುಮಾರು 35 ವರ್ಷಗಳಿಂದ ಕನ್ನಡ ಚಿತ್ರರಂಗದಲ್ಲಿ ಸಹ ಸಂಕಲನಕಾರನಾಗಿ, ಸಂಕಲನಕಾರನಾಗಿ, ನಿರ್ದೇಶಕನಾಗಿ ಕಾರ್ಯನಿರ್ವಹಿಸಿದ ತಂತ್ರಜ್ಞ ಯತೀಶ್ ಕುಮಾರ. ಈಗ ಇವರು ನಿರ್ದೇಶನ ಮಾಡಿರುವ ಚಿತ್ರದ ಹೆಸರು ಜೈ ಗದಾಕೇಸರಿ. ಚಿತ್ರರಂಗದಲ್ಲಿ ತಂತ್ರಜ್ಞನಾಗಿ ಸಾಕಷ್ಟು ಸಿನಿಮಾಗಳಲ್ಲಿ ಕೆಲಸ ಮಾಡಿರುವ ಯತೀಶ್ ಕುಮಾರ್ ನಿರ್ದೇಶನದ ಜೈ ಗದಾ ಕೇಸರಿ ನವೆಂಬರ್ 7ರಂದು ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ. ಹಲವಾರು ಹಿರಿಯ ನಿರ್ದೇಶಕರ ಹಾಗೂ ಹಿರಿಯ ಸಂಕಲನಕಾರರ ಗರಡಿಯಲ್ಲಿ ಪಳಗಿರುವ ಯತೀಶ್ ಕುಮಾರ್ ನಿರ್ದೇಶನದ ಈ ಚಿತ್ರದಲ್ಲಿ ನಿರ್ದೇಶಕನಲ್ಲದವರ ಒಬ್ಬರ ಹೆಸರು ಇವರ ಹೆಸರಿನೊಂದಿಗೆ ತಲುಕಿ ಹಾಕಿಕೊಂಡಿದೆಯಂತೆ. ಅದು ಅವರಿಗೆ ಬೇಸರ ತಂದಿದೆ. ಇವರಿಗೆ ಕಲಾಭಿಮಾನಿಗಳ ಆಶೀರ್ವಾದ ಸಿಗಲಿ. ಚಿತ್ರರಂಗದಲ್ಲಿ ಯಶಸ್ವಿ ನಿರ್ದೇಶಕನಾಗಿ ಬೆಳೆಯಲಿ ಎಂಬುದೆ ನಮ್ಮ ನಿಮ್ಮೆಲ್ಲರ ಆಶಯ.



## ಅಪರೇಷನ್ ಲಂಡನ್ ಕೆಫೆ ನವೆಂಬರ್ 28ಕ್ಕೆ..

ಉಡುಪಿ ಮೂಲದ ಇಂಡಿಯನ್ ಫಿಲಂ ಫ್ಯಾಕ್ಟರಿ, ಮರಾಠಿಯ ದೀಪಕ್ ರಾಣೆ ಫಿಲಂಸ್ ಲಾಂಛನದ ಅಡಿಯಲ್ಲಿ ವಿಜಯ್ ಕುಮಾರ್ ಶೆಟ್ಟಿ ಹವರಾಲ್, ರಮೇಶ್ ಕೊಠಾರಿ, ದೀಪಕ್ ರಾಣೆ ಮತ್ತು ವಿಜಯ್ ಪ್ರಕಾಶ್ ನಿರ್ಮಾಣ ಮಾಡಿರುವ ಈ ಚಿತ್ರ ಕನ್ನಡ ಮರಾಠಿ ಮತ್ತು ಹಿಂದಿ ಭಾಷೆಯಲ್ಲಿ ಏಕಕಾಲದಲ್ಲಿ ಬಿಡುಗಡೆಯಾಗಲಿದೆ. ತನ್ನ ಮೊದಲ ಚಿತ್ರ 'ಜಿಲ್ಕಾ'ದ ಮೂಲಕ ಲವರ್ ಕಮ್ ಚಾಕಲೇಟ್ ಬಾಯ್ ಆಗಿದ್ದ ಕವೀಶ್ ಶೆಟ್ಟಿ 'ಅಪರೇಷನ್ ಲಂಡನ್ ಕೆಫೆ'ಯಲ್ಲಿ ಅಭಿನಯಿಸಿದ್ದಾರೆ. ಇವರಿಗೆ ಜೊತೆಯಾಗಿ ಕನ್ನಡಿಗರ ಮನೆ ಮಾತಿನ ಬೆಡಗಿ ಮೇಘಾ ಶೆಟ್ಟಿ ಹಳ್ಳಿ ಸೊಗಡಿನ ಹೈಸ್ಕೂಲು ಹುಡುಗಿಯ ಗೆಟಪ್ಪಿನಲ್ಲಿ ಮಿಂಚಿದ್ದಾರೆ. ಮರಾಠಿಯ ಶಿವಾನಿ ಸುರ್ವೆ, ವಿರಾಟ್ ಮಡ್ಕೆ ತೆರೆ ಹಂಚಿಕೊಂಡಿದ್ದರೆ ಮಂಗಳೂರಿನ ಅರ್ಜುನ್ ಕಾಪಿಕಾಡ್ ವಿಶೇಷವಾಗಿ ಒಬ್ಬ ಆರ್ಮಿ ಆಫೀಸರ್ ಆಗಿ ತುಂಬಾ ಖದರ್ರಾಗಿ ಕಾಣುತ್ತಿದ್ದಾರೆ.











KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021